# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 58 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಮಂಗಳವಾರ ದಿನಾಂಕ : 08-09-2026 ಪುಟ : 04 ಬೆಲೆ : 2-00

## ಶಾಸಕರಿಗೆ ಆತಂಕ ಬೇಡ, ಇನ್ನಷ್ಟು ತಾಲೂಕುಗಳು ಬರಪೀಡಿತ ಘೋಷಣೆ: ಸಿಎಂ



ಬೆಂಗಳೂರು: ಯಾವುದೇ ಶಾಸಕರು ಆತಂಕ ಪಡುವ ಅಗತ್ಯವಿಲ್ಲ. ಬರ ತೀವ್ರ ಇರುವ ಕ್ಷೇತ್ರಗಳನ್ನು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗುವುದು. ಸದ್ಯವೇ ಈ ಪ್ರಕ್ರಿಯೆ ಆಗಲಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ದೇವನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ರಾಜ್ಯದಲ್ಲಿ ಭೀಕರ ಬರದ ಪರಿಸ್ಥಿತಿ ನಿರ್ಮಾಣವಾಗಿದ್ದು, ಬರ ಘೋಷಣೆ ವಿಚಾರದಲ್ಲಿ ವೈಜ್ಞಾನಿಕ ಹಾಗೂ ತಾಂತ್ರಿಕ ವರದಿಗಳನ್ನು ಆಧರಿಸಿ 2-3 ಹಂತಗಳಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಹಾಗೂ ಇನ್ನೂ ಹಲವು ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗುವುದು ಎಂದು ಹೇಳಿದರು.

ಹಲವು ತಾಲ್ಲೂಕಿನಿಂದ ಬರದ ವರದಿಗಳು ಬರುತ್ತಿವೆ. ಇನ್ನೂ ಬಹಳ ತಾಲೂಕುಗಳು ಘೋಷಣೆಯಾಗುತ್ತವೆ. ಬಹಳ ಕಡೆ ಭೀಕರ ಬರ ಇದೆ. 21 ದಿನ ಮಳೆಯಾಗದ ಸ್ಥಳಗಳನ್ನು ಗುರುತಿಸಿ ತಾಂತ್ರಿಕ ವರದಿ ಆಧರಿಸಿ ತೀರ್ಮಾನ ಮಾಡಲಾಗುವುದು ಎಂದರು.

ಶಾಸಕರು ಯಾರೂ ಆತಂಕ ಪಡಬೇಡಿ. ಎಲ್ಲೆಲ್ಲಿ ಬರ ಇದೆ

2ನೇ ಪುಟಕ್ಕೆ...

**ವಿಶೇಷ ಅಧಿವೇಶನ**

"ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿರುವ ಹಿನ್ನೆಲೆಯಲ್ಲಿ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ವಿಶೇಷ ವಿಧಾನಸಭೆ ಅಧಿವೇಶನ ಕರೆಯಲಾಗಿದೆ. ಬರಪೀಡಿತ ಪ್ರದೇಶಗಳ ವಾಸ್ತವ ಸ್ಥಿತಿಯನ್ನು ವೈಜ್ಞಾನಿಕವಾಗಿ ಪರಿಶೀಲಿಸಿ, ರೈತರಿಗೆ ಅಗತ್ಯ ನೆರವು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ" ಎಂದರು.

## ವಾರದಲ್ಲಿ 2 ದಿನ ಜಿಪಂ ಸಿಇಓಗಳು ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲಿಸಲಿ: ಖಂಡ್ರೆ



ಬೆಂಗಳೂರು: ರಾಜ್ಯದ ಎಲ್ಲ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು (ಸಿಇಓ) ವಾರದಲ್ಲಿ ಕನಿಷ್ಠ 2 ದಿನ 4-5 ಗ್ರಾಮಗಳಿಗಾದರೂ ದಿಢೀರ್ ಭೇಟಿ ನೀಡಿ ಖುದ್ದು ಪರಿಶೀಲಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಸಿಇಓಗಳು ಗ್ರಾಮ ಪಂಚಾಯತಿಗಳಿಗೆ ಪೂರ್ವ ಸೂಚನೆ ನೀಡದೆ ಭೇಟಿ ನೀಡಿ, ಹಾಜರಾತಿ, ಪಿಡಿಓ ಮತ್ತು ತಾಲೂಕು ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯವೈಖರಿ ಪರಾಮರ್ಶಿಸುವುದರ ಜೊತೆಗೆ, ಜನರ ಅಹವಾಲು ಆಲಿಸಿ ಸ್ಥಳದಲ್ಲೇ ಕೆಲವು ಸಮಸ್ಯೆಗಳನ್ನಾದರೂ ಪರಿಹರಿಸಬೇಕು

2ನೇ ಪುಟಕ್ಕೆ...

## ಎಲ್‌ಪಿಜಿ ನಿಯಮ ಸಡಿಲ: ಗ್ರಾಮೀಣ ಭಾಗಕ್ಕೂ ಎಲ್‌ಪಿಜಿ ಬುಕ್ಕಿಂಗ್ ಅವಧಿ 25 ದಿನ



ತಿರುವನಂತಪುರ: ನಗರ ಪ್ರದೇಶಗಳಂತೆ ಗ್ರಾಮೀಣ ಪ್ರದೇಶಗಳ ಗ್ರಾಹಕರು ಇನ್ನು ಮುಂದೆ ಒಂದು ಸಿಲಿಂಡರ್ ಖರೀದಿಸಿದ 25 ದಿನಗಳ ನಂತರ ಮತ್ತೊಂದು ಸಿಲಿಂಡರ್ ಪಡೆಯಬಹುದು ಎಂದು ಕೇಂದ್ರ ಸಚಿವ ಸುರೇಶ್ ಗೋಪಿ ಸೋಮವಾರ ತಿಳಿಸಿದ್ದಾರೆ.

ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ಮರುಪೂರಣ (ರಿಫಿಲ್) ಅವಧಿಯನ್ನು ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೆ ಒಂದೇ ರೀತಿ ನಿಗದಿಪಡಿಸಲಾಗಿದೆ ಎಂದು ಅವರು ಫೇಸ್‌ಬುಕ್

2ನೇ ಪುಟಕ್ಕೆ...

## ಒಳಿತಿಗಾಗಿ ಎಐ ಬಳಸಿ, ರಾಜಕೀಯಕ್ಕಲ್ಲ: ಅಖಿಲೇಶ್ ಯಾದವ್



ಲಖನೌ: ಕೃತಕ ಬುದ್ಧಿಮತ್ತೆಯನ್ನು ಸಾರ್ವಜನಿಕರ ಒಳಿತಿಗಾಗಿ ಬಳಸಬೇಕು. ನಕಾರಾತ್ಮಕ ರಾಜಕೀಯ ಮಾಡಲು ಅಲ್ಲ ಎಂದು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಸೋಮವಾರ(ಸೆ.7) ಹೇಳಿದ್ದಾರೆ.

ಎಐ ಅನ್ನು ಒಳ್ಳೆಯದಕ್ಕೆ ಬಳಸಬೇಕು, ನಕಾರಾತ್ಮಕ ರಾಜಕೀಯಕ್ಕಲ್ಲ. ಆದರೆ, ಇದೀಗ ಅಧಿಕಾರದಲ್ಲಿರುವವರು ಸರ್ಕಾರಿ ಹಣವನ್ನು ಬಳಸಿಕೊಂಡು ಎಐ ವಿಡಿಯೊಗಳ ಮೂಲಕ ಪಿತೂರಿಗಳನ್ನು ಮಾಡುತ್ತಿದ್ದಾರೆ. ಅವರು ಆ ರೀತಿಯ ವಿಡಿಯೊ ಮಾಡುವುದನ್ನು ಮುಂದುವರಿಸಿದರೆ, ನಾವೂ ಅದನ್ನು

2ನೇ ಪುಟಕ್ಕೆ...

## ಅಹಿಂದ ಯಾರೊಬ್ಬರ ಆಸ್ತಿ ಅಲ್ಲ: ಸಚಿವ ಸತೀಶ ಜಾರಕಿಹೊಳಿ



ಬೆಂಗಳೂರು : 'ಹಿಂದುಳಿದ ಜಾತಿಗಳ ಒಕ್ಕೂಟದ ರಜತ ಮಹೋತ್ಸವ ಕಾರ್ಯಕ್ರಮಕ್ಕೆ ನನ್ನನ್ನು ಕರೆದಿಲ್ಲ. ಹೀಗಾಗಿ ಹೋಗಿಲ್ಲ' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿದ ಅವರು, 'ಕರೆಯದೇ ಇದ್ದಾಗ ಹೇಗೆ ಹೋಗಲಿ? ಆಯೋಜ-ಕರು ಕರೆದಿದ್ದರೆ ಹೋಗುತ್ತಿದ್ದೆ. ಹಾಗೆಂದು, ಈ ವಿಷಯ ವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿಲ್ಲ. ಅಹಿಂದ ಎನ್ನುವುದು ಯಾರದೇ ಒಬ್ಬರ ಆಸ್ತಿ ಅಲ್ಲ. ಯಾರು ಬೇಕಾದರೂ

2ನೇ ಪುಟಕ್ಕೆ....

## ಬಿ. ನಾಗೇಂದ್ರಗೆ ಬಿಗ್ ಶಾಕ್: ಮತ್ತೆ ತೀವ್ರ ವಿಚಾರಣೆಗೆ ಒಳಪಡಿಸಿದ ED



ಬೆಂಗಳೂರು: ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ಜಾರಿ ನಿರ್ದೇಶನಾಲಯ ಮತ್ತೆ ಶಾಕ್ ನೀಡಿದೆ. ಇಡಿ ಸೋಮವಾರ ಬಿ ನಾಗೇಂದ್ರ ಅವರನ್ನು ಮತ್ತೊಮ್ಮೆ ವಿಚಾರಣೆಗೆ ಒಳಪಡಿಸಿದೆ.

ಇಂದು ವಿಚಾರಣೆಗೆ ಹಾಜರಾಗುವಂತೆ ನಾಗೇಂದ್ರ ಅವರಿಗೆ ಇಡಿ ಸಮನ್ಸ್ ನೀಡಿತ್ತು. ಈ ಹಿನ್ನೆಲೆಯಲ್ಲಿ ನಾಗೇಂದ್ರ ಅವರು ಬೆಂಗಳೂರಿನ ಜಾಲಹಳ್ಳಿಯ HMT ಲೇಔಟ್‌ನಲ್ಲಿರೋ ಇಡಿ ಕಚೇರಿಗೆ ಆಗಮಿಸಿ ವಿಚಾರಣೆಗಾಗಿ ಹಾಜರಾಗಿದ್ದಾರೆ.

**ಮರು ವಿಚಾರಣೆ ಯಾಕೆ? :** ಚಾರ್ಜ್‌ಶೀಟ್ ಬಳಿಕ ಮತ್ತಷ್ಟು ಮಾಹಿತಿ ಪಡೆಯಲು ಇಂದು ವಿಚಾರಣೆಗೆ ಹಾಜರಾಗುವಂತೆ ನಾಗೇಂದ್ರಗೆ ಅವರಿ ಇಡಿ ಸಮನ್ಸ್ ನೀಡಿತ್ತು ಎನ್ನಲಾಗಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಸಂಬಂಧ ನಾಗೇಂದ್ರ ಅವರು ಈಗಾಗಲೇ ಮೂರು ತಿಂಗಳು ಜೈಲುವಾಸ ಅನುಭವಿಸಿದ್ದು, ಬಳಿಕ ಕೋರ್ಟ್‌ನಿಂದ ಜಾಮೀನು ಪಡೆದು ಹೊರಬಂದಿದ್ದರು.

ಪ್ರಕರಣ ಸಂಬಂದ ಮಾಜಿ ಸಚಿವ ಬಿ.ನಾಗೇಂದ್ರ ವಿರುದ್ಧ ಸಿಬಿಐ ಸಹ ಚಾರ್ಜ್‌ಶೀಟ್ ಸಲ್ಲಿಸಿದೆ. ಅಲ್ಲದೆ ಜಾರಿ ನಿರ್ದೇಶನಾಲಯ(ಇಡಿ) ತನಿಖೆ ನಡೆಸಿ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದೆ.

## ಅವಹೇಳನಕಾರಿ ಹೇಳಿಕೆ ಸಹಿಸಲ್ಲ: ಉದಯನಿಧಿಗೆ ವಿಜಯ್ ತಿರುಗೇಟು



ಚೆನ್ನೈ: ಮಹಿಳೆಯರ ವಿರುದ್ಧ ಅವಹೇಳನಕಾರಿ ಮತ್ತು ದ್ವಂದ್ವಾರ್ಥದ ಮಾತುಗಳನ್ನು ನಮ್ಮ ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಎಚ್ಚರಿಕೆ ನೀಡಿದ್ದಾರೆ.

ನಟಿ ತ್ರಿಷಾ ಕೃಷ್ಣನ್ ಅವರನ್ನು ಪರೋಕ್ಷವಾಗಿ ಉಲ್ಲೇಖಿಸಿ ಉದಯನಿಧಿ ಸ್ಟಾಲಿನ್ ನೀಡಿ-ದ್ದ ದ್ವಂದ್ವಾರ್ಥ ಮತ್ತು ಆಕ್ಷೇಪಾರ್ಹ ಹೇಳಿಕೆಗೆ ಸಂಬಂಧಿಸಿದಂತೆ, ವಿಜಯ್ ಇದೇ ಮೊದಲ ಬಾರಿಗೆ ಪ್ರತಿಕ್ರಿಯಿಸಿದ್ದಾರೆ.

ಮಹಿಳೆಯರೇ ನನ್ನ ಗೆಲುವಿನ ರೂವಾರಿಗಳು ವಿಧಾನಸಭೆಯಲ್ಲಿ ಮಾತನಾಡಿದ ಸಿಎಂ ವಿಜಯ್, ನನ್ನ ರಾಜಕೀಯ ಗೆಲುವಿನ ಹಿಂದೆ

2ನೇ ಪುಟಕ್ಕೆ...

## ಪಕ್ಷದ ಹಿರಿಯರಿಗೆ ಹೀಗಾ ಅವಮಾನ ಮಾಡೋದು? ಮಹದೇವಪ್ಪ ಪರ ಬ್ಯಾಟ್ ಬೀಸಿ ಬೈರತಿ ವಿರುದ್ಧ ಪ್ರತಾಪ್ ಕಿಡಿ



ಬಳ್ಳಾರಿ: ಸರ್ಕಾರಿ ನಿವಾಸ ತೆರವು ವಿಚಾರದಲ್ಲಿ ಮಾಜಿ ಸಚಿವ ಡಾ. ಎಚ್.ಸಿ. ಮಹದೇವಪ್ಪ

ಪರ ಬ್ಯಾಟ್ ಬೀಸಿದ ಮಾಜಿ ಸಂಸದ ಪ್ರತಾಪ್ ಸಿಂಹ ಹಾಲಿ ಸಚಿವ ಬೈರತಿ ಸುರೇಶ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಕಂಪ್ಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಮಹದೇವಪ್ಪ ಅವರು ಹಿರಿಯ ನಾಯಕರು. ಸಿದ್ದರಾಮಯ್ಯ ಅವರಿಗೆ ಹೆಗಲು ಕೊಟ್ಟು, ಕಷ್ಟದ ದಿನಗಳಲ್ಲಿ ಜೊತೆಯಾಗಿ

2ನೇ ಪುಟಕ್ಕೆ...

## ಜೀನ್ಸ್ ರಪ್ತುದಾರರಿಗೆ ಕೇಂದ್ರ, ರಾಜ್ಯ ಸರ್ಕಾರಗಳಿಂದ ನೆರವು




ಬಳ್ಳಾರಿ: ಜೀನ್ಸ್ ಉದ್ಯಮಿದಾರರು ರಪ್ತು ವಲಯಕ್ಕೆ ಪ್ರವೇಶಿಸಲು ಮುಂದಾದರೆ, ಅವರನ್ನು ಪೂರ್ಣ ಪ್ರಮಾಣದ ರಪ್ತುದಾರರನ್ನಾಗಿ ರೂಪಿಸಲು ಕೇಂದ್ರ ಮತ್ತು ಕರ್ನಾಟಕ ಸರ್ಕಾರಗಳು ಎಲ್ಲ ರೀತಿಯ ನೆರವು ಹಾಗೂ ಬೆಂಬಲ ನೀಡಲು ಸಿದ್ಧವಾಗಿವೆ ಎಂದು ಕಲಬುರಗಿ ಉತ್ತರ ವಲಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಜಂಟಿ ನಿರ್ದೇಶಕ ಬಿ.ವಿಠಲರಾಜು ಅವರು ಹೇಳಿದರು.

ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಇವರ ಸಹಯೋಗದೊಂದಿಗೆ ಜಿಲ್ಲೆಯ ಜವಳಿ/ ಜೀನ್ಸ್ ವಲಯದ ಉದ್ದಿಮೆದಾರರಿಗೆ ನಗರದ ಮೀನಾಕ್ಷಿ ಸರ್ಕಲ್ ಹತ್ತಿರದ ಡಿಸ್ಟ್ರಿಕ್ಟ್ ಚೇಂಬರ್ ಆಫ್ ಕಾಮರ್ಸ್ ಸಭಾಭವನದಲ್ಲಿ

2ನೇ ಪುಟಕ್ಕೆ...


## 'ಇಸ್ರೋ' ಖಾಸಗೀಕರಣವಾಗುತ್ತಿಲ್ಲ ಬಾಹ್ಯಾಕಾಶ ಸಂಸ್ಥೆ ಮುಖ್ಯಸ್ಥ



ಬೆಂಗಳೂರು : 'ಭಾರತೀಯ ಬಾಹ್ಯಾಕಾಶ ಸಂಸ್ಥೆಯನ್ನು ಖಾಸಗೀಕರಣಗೊಳಿಸಲಾಗುತ್ತಿಲ್ಲ. ಅಲ್ಲದೆ, ಬಾಹ್ಯಾಕಾಶ ಕ್ಷೇತ್ರದಲ್ಲಿ ಖಾಸಗಿ ವಲಯದ ಪಾತ್ರವನ್ನು ವಿಸ್ತರಿಸುವ ಸರ್ಕಾರದ ಕ್ರಮದ ಕುರಿತು ಉದ್ಯೋಗಿಗಳಲ್ಲಿರುವ ಆತಂಕಗಳನ್ನು ನಿವಾರಿಸಲಾಗುವುದು' ಎಂದು ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಭರವಸೆ ನೀಡಿದ್ದಾರೆ. ಬೆಂಗಳೂರು ಸ್ಪೇಸ್ ಎಕ್ಸ್ಪೋ ಸಂದರ್ಭದಲ್ಲಿ ಮಾತನಾಡಿದ ನಾರಾಯಣನ್,

2ನೇ ಪುಟಕ್ಕೆ...

## ಕರುನಾಡನ್ನು ಕಂಗೆಡಿಸಿದೆ ಬಿರುಬಿಸಿಲು; ಬೆಂಗಳೂರು, ಮೈಸೂರು, ರಾಯಚೂರಲ್ಲಿ ಅಧಿಕ



ಬೆಂಗಳೂರು: ಸೆಪ್ಟಂಬರ್ ಮೊದಲ ವಾರದ ಮಳೆಗಾಲದಲ್ಲೇ ಬಿಸಿಲಿನ ಪ್ರಮಾಣ ಏರಿ-ಕೆಯಾಗಿದೆ. ಕಳೆದ ಎರಡು ದಿನದಿಂದ ಕರ್ನಾಟಕದ ಹಲವು ಜಿಲ್ಲೆಗಳ ಗರಿಷ್ಠ ಉಷ್ಣಾಂಶದ ಪ್ರಮಾಣದಲ್ಲಿ ಗಣನೀಯ ಏರಿಕೆ-ಯಾಗಿದ್ದು, ಬಿರುಬಿಸಿಲಿನ ವಾತಾವರಣ ಕಂಡು ಬಂದಿದೆ. ಬೆಂಗಳೂರು, ಮೈಸೂರು, ಮಂಡ್ಯ ಜಿಲ್ಲೆಗಳಲ್ಲಿ ಉಷ್ಣಾಂಶದ

2ನೇ ಪುಟಕ್ಕೆ...

## ಆಳವಾದ ಅಧ್ಯಯನದಿಂದ ಶಾಶ್ವತ ಗಜಲ್ ಸಾಹಿತ್ಯ : ಪ್ರೊ. ಸಿದ್ದರಾಜು ಪುಜಾರಿ



ಧಾರವಾಡ: ಗಜಲ್ ಬರೆಯುವ ಲೇಖಕರು ಆಳವಾಗಿ ಅಧ್ಯಯನ ಮಾಡಿ ಗಜಲ್ ರಚನೆಗೆ ತೊಡಗಿದರೆ ಬಹುಕಾಲ ನಿಲ್ಲುವ ಗಜಲ್ ಸಾಹಿತ್ಯ ಹುಟ್ಟಲಿದೆ...ಎಂದು ಪ್ರೊ. ಸಿದ್ದರಾಜು ಪೂಜಾರಿ ಕರೆ ನೀಡಿದರು.

ಅವರು ಅಕ್ಷರದೀಪ ಫೌಂಡೇಶನ್ ಗದಗ ಹಾಗೂ ಸರ್ವ ಗಜಲ್ ಸಂಘಟನೆಗಳ ಮೂಲಕ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಭವನದಲ್ಲಿ ರಾಷ್ಟ್ರೀಯ ಗಜಲ್ ಗೋಷ್ಠಿ, ರಾಷ್ಟ್ರೀಯ ಗಜಲ್ ಪುರಸ್ಕಾರ ಹಾಗೂ ಗಜಲ್ ಗಾಯನ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿ-ಥಿಯಾಗಿ ಭಾಗವಹಿಸಿದ್ದ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರು ಹಾಗೂ ಖ್ಯಾತ ಗಜಲ್ ಲೇಖಕರು ಆದ ಡಾ.ಸಿದ್ಧರಾಮ

2ನೇ ಪುಟಕ್ಕೆ...

ಒಂದನೇ ಪುಟದಿಂದ..

## ಶಾಸಕರಿಗೆ ಆತಂಕ ಬೇಡ, ಇನ್ನಷ್ಟು ತಾಲೂಕುಗಳು ಶೀಘ್ರ ಬರಪೀಡಿತ ಘೋಷಣೆ: ಸಿಎಂ

ಎಂಬುದನ್ನು ವೈಜ್ಞಾನಿಕವಾಗಿ ನಿರ್ಧರಿಸಬೇಕು. ಉಪಮುಖ್ಯಮಂತ್ರಿ ವರದಿಗಳನ್ನು ತರಿಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಮಾತನಾಡಿದ್ದೇವೆ. ಒಂದೇ ಸಲ ಎಲ್ಲವನ್ನೂ ಮಾಡಲು ಆಗುವುದಿಲ್ಲ. ಹಂತಗಳಲ್ಲಿ ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಿದರು.

ನೈಸ್ ಯೋಜನೆ ವಿಚಾರವಾಗಿ ರಾಜ್ಯ ಸರ್ಕಾರ ಕಾನೂನು ಉಲ್ಲಂಘಿಸಿ ಸಂಪುಟ ತೀರ್ಮಾನ ಕೈಗೊಂಡಿದೆ ಎಂದು ಬಹಿರಂಗ ಪತ್ರ ಬರೆದಿರುವ ಬಗ್ಗೆ ಗಮನ ಸೆಳೆದಾಗ, "ನಾವು ಏನು ಮಾಡಿದರೂ ಕಾನೂನು ಚೌಕಟ್ಟಿನಲ್ಲೇ ಮಾಡುತ್ತೇವೆ. ಕಾನೂನು ಅಭಿಪ್ರಾಯ ಪಡೆದುಕೊಳ್ಳುತ್ತೇವೆ. ಎಲ್ಲವನ್ನೂ ಮರುಪರಿಶೀಲನೆ ಮಾಡುತ್ತಿದ್ದೇವೆ. ಕಾನೂನು ಬಿಟ್ಟು ಏನನ್ನೂ ಮಾಡುವುದಿಲ್ಲ. ಕಾನೂನು ಉಲ್ಲಂಘನೆಯಾಗಿದ್ದರೆ ಕೋರ್ಟ್ ಇದೆ, ಹೋರಾಟ ಮಾಡಲಿ" ಎಂದು ತೀಕ್ಷ್ಣವಾಗಿ ಹೇಳಿದರು.

ರೈತರು ಆಸ್ತಿ ಕಳೆದುಕೊಂಡಿರುವ ಹಿನ್ನೆಲೆಯಲ್ಲಿ ಅವರನ್ನು ರಕ್ಷಿಸುವುದು ಸರ್ಕಾರದ ಜವಾಬ್ದಾರಿ. ಹಿಂದಿನ ಸರ್ಕಾರಗಳು ಒಪ್ಪಂದಗಳಿಗೆ ಸಹಿ ಮಾಡಿ ಕೊಟ್ಟಿವೆ. ರೈತರು ಆಸ್ತಿ ಕಳೆದುಕೊಂಡಿದ್ದಾರೆ, ಅವರನ್ನು ರಕ್ಷಣೆ ಮಾಡಬೇಕು. ನನಗೂ ಪ್ರಜ್ಞೆ ಇದೆ. ಮನುಷ್ಯ ವಿದ್ಯಾವಂತನಾಗಿರದಿದ್ದರೂ ಬುದ್ಧಿವಂತನಾಗಿರಬೇಕು, ಸಾಮಾನ್ಯ ಪ್ರಜ್ಞೆ ಇರಬೇಕು ಎಂದು ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದರು.

## ವಾರದಲ್ಲಿ 2 ದಿನ ಜಿಪಂ ಸಿಇಓಗಳು ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲಿಸಲಿ: ಖಂಡ್ರೆ

ಎಂದು ತಿಳಿಸಿದ್ದಾರೆ.

ರಾಜ್ಯದ 31 ಜಿಲ್ಲೆಗಳಲ್ಲಿ 5900ಕ್ಕೂ ಅಧಿಕ ಗ್ರಾಮ ಪಂಚಾಯತಿಗಳಿದ್ದು, 57,879 ವಸತಿ ಪ್ರದೇಶಗಳಿವೆ. ರಾಜ್ಯದ ಒಟ್ಟು ಜನಸಂಖ್ಯೆ 6 ಕೋಟಿ 13 ಲಕ್ಷ ಇದ್ದು, ಈ ಪೈಕಿ 26,589 ಹಳ್ಳಿಗಳಲ್ಲಿ 4 ಕೋಟಿ 45 ಲಕ್ಷ ಜನರು ವಾಸುತ್ತಿದ್ದಾರೆ. ಅಂದರೆ ರಾಜ್ಯದ ಮುಕ್ಕಾಲು ಭಾಗ ಜನಸಂಖ್ಯೆ ಇರುವುದೇ ಗ್ರಾಮೀಣ ಪ್ರದೇಶಗಳಲ್ಲಿ ಹೀಗಾಗಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಗ್ರಾಮಾಭಿವೃದ್ಧಿಗೆ ಗಮನ ಹರಿಸಬೇಕು ಎಂದು ಹೇಳಿದ್ದಾರೆ. ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು, ಉತ್ತಮ ರಸ್ತೆ, ನೈರ್ಮಲ್ಯ, ವಿಬಿಜಿ ರಾಮ್ ಜಿ ಅಡಿ ಸ್ಥಳದಲ್ಲೇ ಉದ್ಯೋಗ ನೀಡುವ ಬಗ್ಗೆ ಹೆಚ್ಚಿನ ಗಮನ ಹರಿಸಿದರೆ ಗ್ರಾಮಗಳಿಂದ ಜನರು ನಗರ-ಕ್ಕೆ ವಲಸೆ ಹೋಗುವುದು ತಪ್ಪಲಿದ್ದು, ಇದು ನಗರಗಳ ಮೇಲಿನ ಒತ್ತಡವನ್ನೂ ತಗ್ಗಿಸುತ್ತದೆ, ಜೊತೆಗೆ ಗ್ರಾಮಗಳ ಅಭಿವೃದ್ಧಿಯೂ ಆಗುತ್ತದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಜಲ ಜೀವನ ಮಿಷನ್, ವಿಬಿಜಿ ರಾಮ್ ಜಿ, ಪ್ರಧಾನಮಂತ್ರಿ ವಸತಿ ಯೋಜನೆ (ಗ್ರಾಮೀಣ) ಮತ್ತು ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ, ಮುಖ್ಯಮಂತ್ರಿಗಳ ರಸ್ತೆ ಯೋಜನೆ ಇತ್ಯಾದಿಗಳ ಸಮರ್ಪಕ ಅನುಷ್ಠಾನ ಆಗುತ್ತಿದೆ-ಯೇ, ಕೆರೆಗಳ ಒತ್ತುವರಿ ತೆರವು ಆಗುತ್ತಿದೆಯೇ ಹಾಗೂ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಒಣ ಹಾಗೂ ಹಸಿ ತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿದೆಯೇ ಎಂಬುದನ್ನು ಸಿಇಓಗಳು ನಿಯಮಿತವಾಗಿ ಪರಿಶೀಲಿಸಿದರೆ ಆಗ ಕಾಮಗಾರಿಗಳು ಚುರುಕಾಗಲಿವೆ ಎಂದು ಈಶ್ವರ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

## ಅಹಿಂದ ಯಾರೊಬ್ಬರ ಆಸ್ತಿ ಅಲ್ಲ:

ಕ್ಲೈಮ್ ಮಾಡಬಹುದು' ಎಂದರು.
'ಬರಗಾಲ, ರೈತರ ಸಮಸ್ಯೆ, ಕಸ್ತೂರಿ ರಂಗನ್ ವರದಿ ಕುರಿತು ಚರ್ಚಿಸಲು ವಿಧಾನ ಮಂಡಲದ ವಿಶೇಷ ಅಧಿವೇಶನ ಕರೆಯಲಾಗಿದೆ. ಸರ್ಕಾರ-ಕ್ಕೆ 100 ದಿನ ತುಂಬಿದ ಪ್ರಯುಕ್ತ ಹೊಸ ಕಾರ್ಯಕ್ರಮಗಳನ್ನು ಘೋಷಣೆ ಮಾಡಬಹುದು. ಈಗಾಗಲೇ ಘೋಷಣೆ ಮಾಡಿರುವ ಕಾರ್ಯಕ್ರಮಗಳ ಪರಿಶೀಲನೆ ಕೂಡ ಮಾಡಬಹುದು. ಆ ಕೆಲಸವನ್ನು ಮುಖ್ಯಮಂತ್ರಿ ಮಾಡಬೇಕು' ಎಂದೂ ಹೇಳಿದರು.

## ಪಕ್ಷದ ಹಿರಿಯರಿಗೆ ಹೀಗಾ ಅವಮಾನ ಮಾಡೋದು? ಮಹದೇವಪ್ಪ ಪರ ಬ್ಯಾಟ್ ಬೀಸಿ ಬೈರತಿ ವಿರುದ್ಧ ಪ್ರತಾಪ್ ಕಿಡಿ

ನಿಂತವರು. ನಮ್ಮ ಹಳೆ ಮೈಸೂರು ಭಾಗದ ದಲಿತರ ಪ್ರಬಲ ಧ್ವನಿಯಾಗಿದ್ದಾರೆ. ಅಂತವರಿಗೆ ಸರ್ಕಾರಿ ಮನೆ ಖಾಲಿ ಮಾಡಲು ಸೂಕ್ತ ಸಮಯಾವಕಾಶ ನೀಡಬೇಕು ಎಂದು ಹೇಳಿದರು.

3 ರಿಂದ 6 ತಿಂಗಳು ತಡವಾಗಿ ಖಾಲಿ ಮಾಡಿದರೆ ಏನು ಮುಳುಗಿ ಹೋಗುತ್ತದೆ? ಸುರೇಶ್‌ಗೆ ಅದೇ ಮನೆ ಬೇಕೆಂದು ಹಠ ಹಿಡಿದಿರುವುದೇಕೆ? ಪಕ್ಷ ಕಟ್ಟಿದ ಹಿರಿಯ ನಾಯಕರಿಗೆ ಒಂದು ನಿವಾಸದ ವಿಚಾರದಲ್ಲಿ ಈ ರೀತಿ ಅಗೌರವ ತೋರುವುದು ಸರಿಯಲ್ಲ. ಅದೇನು ನಿಮ್ಮ ಸ್ವಂತ ಮನೆಯೇ? ಎಂದು ನೇರವಾಗಿ ಪ್ರಶ್ನಿಸಿದರು.

ಬೆಂಗಳೂರಿನಲ್ಲಿ ನಡೆದ ಅಹಿಂದ ಸಮಾವೇಶವನ್ನು ಉಲ್ಲೇಖಿಸಿ ಕಾಂಗ್ರೆಸ್ ವಿರುದ್ಧ ಅವರು, "ಸಿದ್ದರಾಮಯ್ಯ ಅಹಿಂದ ಸಮಾವೇಶ ನಡೆಸಿದರು, ಆದರೆ ಅದರ ಮೂಲ ಶಕ್ತಿಯಾಗಿದ್ದ ಸತೀಶ್ ಜಾರಕಿಹೊಳಿ ಅವರನ್ನೇ ಕರೆದಿಲ್ಲ. ಅಹಿಂದ ಎಂದರೆ ಸಿದ್ದರಾಮಯ್ಯ ಒಬ್ಬರೇ ಅಲ್ಲ ಎಂಬುದನ್ನು ಸತೀಶ್ ಜಾರಕಿಹೊಳಿ ಈಗಾಗಲೇ ತೋರಿಸಿದ್ದಾರೆ. ಕಾಂಗ್ರೆಸ್ ಸಂಪೂರ್ಣವಾಗಿ ಒಡೆದ ಮನೆಯಾಗಿದ್ದು, ರಾಜ್ಯದ ಜನರು ಆಡಳಿತದಿಂದ ಬೇಸತ್ತಿದ್ದಾರೆ. ರಾಜ್ಯ-ಕ್ಕೆ ಸಮರ್ಥ ನಾಯಕತ್ವ ನೀಡುವ ಉದ್ದೇಶದಿಂದ ಬಿ.ವೈ. ವಿಜಯೇಂದ್ರ ಪಾದಯಾತ್ರೆ ನಡೆಸುತ್ತಿದ್ದಾರೆ" ಎಂದರು. ರಾಜ್ಯ ಸಚಿವ ಸಂಪುಟದಲ್ಲಿ ಮತ್ತಿಬ್ಬರು ಸಚಿವರ ವಿಕೆಟ್ ಬೀಳಲಿದೆ ಎಂಬ ಚರ್ಚೆ ಕುರಿತು ಪ್ರತಿಕ್ರಿಯಿಸಿದ ಅವರು, ಈ ಪಾದಯಾತ್ರೆ ಮುಗಿದ ಬಳಿಕ ಸಚಿವರಾದ ಸಂತೋಷ್ ಲಾಡ್ ಹಾಗೂ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ತೀವ್ರ ಹೋರಾಟ ಕೈಗೆತ್ತಿಕೊಳ್ಳಬೇಕು ಎಂದು ಒತ್ತಾಯಿಸಿದರು.

## ಜೀನ್ಸ್ ರಫ್ತುದಾರರಿಗೆ ಕೇಂದ್ರ, ರಾಜ್ಯ ಸರ್ಕಾರಗಳಿಂದ ನೆರವು

ಸೋಮವಾರ ಆಯೋಜಿಸಲಾಗಿದ್ದ ಒಂದು ದಿನದ 'ರಫ್ತು ಪ್ರೋತ್ಸಾಹನ ಕಾರ್ಯಾಗಾರ' ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ಉತ್ಪಾದನೆಗೆ ಸೀಮಿತವಾಗದೆ ರಫ್ತು ಮಾಡುವ ಇಚ್ಛಾಶಕ್ತಿ ಹಾಗೂ ಪ್ರಾಮಾಣಿಕ ಪ್ರಯತ್ನವನ್ನು ಉದ್ಯಮಿದಾರರು ಬೆಳೆಸಿಕೊಳ್ಳಬೇಕು. ಅಂತರರಾಷ್ಟ್ರೀಯ ಮಾರುಕಟ್ಟೆಗೆ ಉತ್ಪನ್ನಗಳನ್ನು ಕಳುಹಿಸಲು ನಿರ್ದಿಷ್ಟ ಕಾರ್ಯವಿಧಾನ ಮತ್ತು ಗುಣಮಟ್ಟ ಅತ್ಯಂತ ಪ್ರಮುಖವಾಗಿದೆ ಎಂದು ಒತ್ತಿ ಹೇಳಿದರು. ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕ ಮಹಂತೇಶ ಕೆ.ಜಿ.ಕಂಚಿಮಠ ಅವರು ಮಾತನಾಡಿ, ಬಳ್ಳಾರಿ ಜಿಲ್ಲೆಯ ಜೀನ್ಸ್ ಉದ್ಯಮವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಮಹತ್ವಾಕಾಂಕ್ಷೆಯೊಂದಿಗೆ ರಫ್ತು ವಿಭಾಗದಿಂದ ಬಳ್ಳಾರಿಯನ್ನು 'ಆಸ್ಪಿರೇಷನ್ ಡಿಸ್ಟ್ರಿಕ್ಟ್' (ಮಹತ್ವಾಕಾಂಕ್ಷಿ ಜಿಲ್ಲೆ) ಎಂದು ಆಯ್ಕೆ ಮಾಡಲಾಗಿದ್ದು, ರಾಜ್ಯದಲ್ಲಿ ಒಟ್ಟು ನಾಲ್ಕು ಜಿಲ್ಲೆಗಳನ್ನು ಈ ಯೋಜನೆಗೆ ಗುರುತಿಸಲಾಗಿದ್ದು, ಅವುಗಳಲ್ಲಿ ಬಳ್ಳಾ-ರಿಯೂ ಒಂದಾಗಿದೆ ಎಂದು ಹೇಳಿದರು. ಬಳ್ಳಾರಿಯಲ್ಲಿ ಎಂಎಸ್‌ಎಂಇ ವಲಯದಡಿ ಜೀನ್ಸ್ ಉದ್ಯಮಕ್ಕೆ ಅಪಾರ ಅವಕಾಶಗಳಿವೆ. ಪ್ರಸ್ತುತ ಇಲ್ಲಿನ ಸ್ಥಳೀಯ ಉದ್ಯಮಿಗಳು ತಮ್ಮ ವ್ಯವಹಾರವನ್ನು ದೇಶೀಯ ಹಾಗೂ ಪ್ರಾದೇಶಿಕ ಮಾರುಕಟ್ಟೆಗಳಿಗೆ ಮಾತ್ರ ಸೀಮಿತಗೊಳಿಸಿದ್ದಾರೆ. ಇವರಿಗೆ ಜಾಗತಿಕ ಮಟ್ಟದಲ್ಲಿ ವ್ಯಾಪಾರ ಮಾಡುವ ಸಾಮರ್ಥ್ಯವಿದ್ದರೂ, ರಫ್ತು ಪ್ರಕ್ರಿಯೆಯ ಬಗ್ಗೆ ಸೂಕ್ತ ಮಾಹಿತಿಯ ಕೊರತೆ ಇದೆ. ಈ ಕೊರತೆಯನ್ನು ನೀಗಿಸಲು ಹಾಗೂ ಉದ್ಯಮಿಗಳಿಗೆ ಪ್ರೋತ್ಸಾಹ ನೀಡಲು ತಜ್ಞರಿಂದ ರಫ್ತು ಮಾರ್ಗದರ್ಶನ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಇತ್ತೀಚೆಗೆ ಸಂಜೀವರಾಯನಕೋಟೆ ಕೈಗಾರಿಕಾ ಪಾರ್ಕ್‌ನಲ್ಲಿ ಸೈಟ್‌ಗಳನ್ನು ಹಂಚಿಕೆ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಇಲ್ಲಿ ತಲೆಎತ್ತಲಿರುವ ಕೈಗಾರಿಕೆಗಳು ನೇರವಾಗಿ ವಿದೇಶಗಳಿಗೆ ರಫ್ತು ಮಾಡಲು ಸಜ್ಜಾಗಬೇಕಿದೆ. ಬಳ್ಳಾರಿಯ ಜೀನ್ಸ್ ಉತ್ಪನ್ನಗಳು ಬೇರೆ ನಗರಗಳ ಮೂಲಕ ರವಾನೆಯಾಗುವ ಬದಲು, ಬಳ್ಳಾರಿಯಿಂದಲೇ ನೇರವಾಗಿ ಜಾಗತಿಕ ಮಟ್ಟಕ್ಕೆ ರಫ್ತಾಗಬೇಕು ಎಂಬುದು ಈ ಯೋಜನೆಯ ಮುಖ್ಯ ಆಶಯವಾಗಿದೆ. ಸ್ಥಳೀಯ ಉದ್ಯಮಿಗಳು ಇದರ ಸದುಪಯೋಗ ಪಡೆದುಕೊಂಡು ಅಂತರರಾಷ್ಟ್ರೀಯ ಮಟ್ಟದಲ್ಲಿ ಬಳ್ಳಾರಿಯ ಛಾಪು ಮೂಡಿಸಬೇಕು ಎಂದು ಕರೆ ನೀಡಿದರು.

## 'ಇಸ್ರೋ' ಖಾಸಗೀಕರಣವಾಗುತ್ತಿಲ್ಲ ಬಾಹ್ಯಾಕಾಶ ಸಂಸ್ಥೆ ಮುಖ್ಯಸ್ಥ

ಸಂಸ್ಥೆಯ ಭವಿಷ್ಯದ ಪಾತ್ರಕ್ಕೆ ಸಂಬಂಧಿಸಿದ ಸರ್ಕಾರದ ನೀತಿಯ ಬಗ್ಗೆ ಅಧಿಕೃತ ಸ್ಪಷ್ಟನೆ ಕೋರಿರುವ ಉದ್ಯೋಗಿಗಳ ಸಂಘಟನೆಗಳು ಸೇರಿದಂತೆ, ಇಸ್ರೋದ ಸಿಬ್ಬಂದಿಯ ಕೆಲವು ವರ್ಗಗಳು ವ್ಯಕ್ತಪಡಿಸಿದ ಕಳವಳಗಳಿಗೆ ಪ್ರತಿಕ್ರಿಯಿಸಿದರು.

'ಬಾಹ್ಯಾಕಾಶ ವಲಯದ ಸುಧಾರಣೆಗಳನ್ನು ಆರು ವರ್ಷಗಳ ಹಿಂದೆ ಜಾರಿಗೆ ತರಲಾಯಿತು. ಅದರನ್ವಯ, ನಾವು ಖಾಸಗಿ ವಲಯಕ್ಕೆ ಬೆಂಬಲ ಮತ್ತು ಮಾರ್ಗದರ್ಶನ ನೀಡುವ ಮೂಲಕ ಬಾಹ್ಯಾಕಾಶ ಪರಿಸರ ವ್ಯವಸ್ಥೆಯನ್ನು ವಿಸ್ತರಿಸಬೇಕಿದೆ' ಎಂದು ನಾರಾಯಣನ್ ಹೇಳಿದರು.

ಭಾರತದ ಬಾಹ್ಯಾಕಾಶ ಕಾರ್ಯಕ್ರಮದಲ್ಲಿ ಖಾಸಗಿ ಉದ್ಯಮವು ದೀರ್ಘಕಾಲದಿಂದ ಪ್ರಮುಖ ಪಾತ್ರ ವಹಿಸಿದೆ ಮತ್ತು ಉಡಾವಣಾ ವಾಹನಗಳ ತಯಾರಿಕೆಗೆ ಈಗಾಗಲೇ ನೂರಾರು ಭಾರತೀಯ ಕಂಪನಿಗಳು ಬೆಂಬಲ ನೀಡುತ್ತಿವೆ ಎಂಬುದನ್ನು ಒತ್ತಿ ಹೇಳಿದರು.

'ಪಿಎಸ್‌ಎಲ್‌ವಿ ಅಥವಾ ಜಿಎಸ್‌ಎಲ್‌ವಿ ಉಡಾವಣೆಯಾದಾಗಲೆಲ್ಲ, ಎಲ್ಲವನ್ನೂ ಇಸ್ರೋವೇ ಮಾಡುತ್ತದೆ ಎಂದು ಭಾವಿಸಬೇಡಿ. ಇದರ ಬಜೆಟ್‌ನ ಸುಮಾರು ಶೇ 80ರಷ್ಟು ಭಾಗವನ್ನು ಭಾರತೀಯ ಕೈಗಾರಿಕೆಗಳೇ ಹೂಡಿಕೆ ಮಾಡುತ್ತವೆ. ಸುಮಾರು 450 ಕೈಗಾರಿಕೆಗಳು ನಮಗಾಗಿ ಕಾರ್ಯನಿರ್ವಹಿಸುತ್ತಿವೆ' ಎಂದು ಹೇಳಿದರು.

ಭಾರತದ ಬಾಹ್ಯಾಕಾಶ ವಲಯದಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಪ್ರಯತ್ನಗಳ ಕುರಿತು ಚರ್ಚೆಗಳು ನಡೆಯುತ್ತಿರುವ ನಡುವೆಯೇ ಈ ಸ್ಪಷ್ಟನೆ ಬಂದಿದೆ. ನೀತಿಯಲ್ಲಿನ ಬದಲಾವಣೆಗಳು ಇಸ್ರೋದ ಪಾತ್ರ, ಅದರ ಸಿಬ್ಬಂದಿ ವರ್ಗ, ನೇಮಕಾತಿ ಪ್ರಕ್ರಿಯೆ ಮತ್ತು ಪ್ರಮುಖ ಸಾಮರ್ಥ್ಯಗಳನ್ನು ಉಳಿಸಿಕೊಳ್ಳುವ ಅದರ ಸಾಮರ್ಥ್ಯದ ಮೇಲೆ ಯಾವ ರೀತಿಯ ಪರಿಣಾಮ ಬೀರಲಿವೆ ಎಂಬುದರ ಕುರಿತು ಸ್ಪಷ್ಟನೆ ನೀಡುವಂತೆ ಇಸ್ರೋದ ಪ್ರಮುಖ ಕೇಂದ್ರಗಳ ನೌಕರರ ಸಂಘಟನೆಗಳು ಕೋರಿವೆ ಎಂದು ವರದಿಯಾಗಿದೆ.

'ಭಾರತವು ತನ್ನ ಉಡಾವಣಾ ಸಾಮರ್ಥ್ಯವನ್ನು ಗಣನೀಯವಾಗಿ ಹೆಚ್ಚಿಸುವ ಗುರಿಯನ್ನು ಹೊಂದಿದೆ ಮತ್ತು ವರ್ಷಕ್ಕೆ ಸುಮಾರು 50 ಉಡಾವಣಾ ವಾಹನಗಳ ಅಗತ್ಯವಿದೆ. ಅಂತಹ ಗುರಿಯನ್ನು ಸಾಧಿಸಲು ಇಸ್ರೋ ಮತ್ತು ಭಾರತೀಯ ಕೈಗಾರಿಕಾ ವಲಯವನ್ನು ಒಳಗೊಂಡಿರುವ ಹೆಚ್ಚು ವಿಸ್ತೃತವಾದ ವ್ಯವಸ್ಥೆಯ ಅಗತ್ಯವಿರುತ್ತದೆ' ಎಂದು ಅವರು ಸೂಚಿಸಿದರು. ಇಸ್ರೋವನ್ನು ಖಾಸಗೀಕರಣಗೊಳಿಸಲಾಗುತ್ತಿದೆ ಎಂಬ ಅಭಿಪ್ರಾಯಗಳನ್ನು ತಳ್ಳಿಹಾಕಿದ ಅವರು, 'ಇಸ್ರೋ ಖಾಸಗೀಕರಣಗೊಂಡಿಲ್ಲ' ಎಂದು

## ಒಳಿತಿಗಾಗಿ ಎಐ ಬಳಸಿ, ರಾಜಕೀಯಕ್ಕಲ್ಲ:

ಆರಂಭಿಸುತ್ತೇವೆ. ಎಐ ಮೂಲಕ ಅವರಿಗಿಂತ ಉತ್ತಮ ರೀತಿಯ ವಿಡಿಯೊ ಮತ್ತು ಹಾಡುಗಳನ್ನು ಸೃಷ್ಟಿಸುತ್ತೇವೆ ಎಂದು ಹೇಳಿದ್ದಾರೆ.

ಎಐ ಎನ್ನುವುದು ಸಮಾಜಕ್ಕೆ ಒಳಿತನ್ನು ತರುವಂತಹದ್ದು. ವೈದ್ಯಕೀಯ ಚಿಕಿತ್ಸೆ, ಕೃಷಿ ಮತ್ತು ಹವಾಮಾನ ಮುನ್ಸೂಚನೆ ಸೇರಿದಂತೆ ಸಮಾಜಕ್ಕೆ ಉಪಯೋಗವಾಗುವ ರೀತಿಯಲ್ಲಿ ಕೃತಕ ಬುದ್ಧಿಮತ್ತೆಯನ್ನು ಬಳಸಬೇಕು ಎಂದು ಹೇಳಿದ್ದಾರೆ.

ಕೃತಕಬುದ್ಧಿಮತ್ತೆಯಿಂದ ಹವಾಮಾನ ಮುನ್ಸೂಚನೆ ದೊರೆಯುವುದರಿಂದ ರೈತರು ತಮ್ಮ ಬೆಳೆಗಳನ್ನು ರಕ್ಷಿಸಿಕೊಳ್ಳಬಹುದು ಮತ್ತು ತಮ್ಮ ಉತ್ಪನ್ನಕ್ಕೆ ಸರಿಯಾದ ಬೆಲೆಯನ್ನು ಪಡೆದುಕೊಳ್ಳಲು ಸಹಾಯವಾಗಲಿದೆ ಎಂದು ಹೇಳಿದ್ದಾರೆ.

## ಕರುನಾಡನ್ನು ಕಂಗೆಡಿಸಿದೆ ಬಿರುಬಿಸಿಲು; ಬೆಂಗಳೂರು, ಮೈಸೂರು, ರಾಯಚೂರಲ್ಲಿ ಅಧಿಕ

ಪ್ರಮಾಣ ಸಾಮಾನ್ಯಕ್ಕಿಂತ ಸುಮಾರು 4 ಡಿಗ್ರಿ ಸೆಲ್ಸಿಯಸ್ ನಷ್ಟು ಹೆಚ್ಚಳವಾಗಿದೆ. ಇದಲ್ಲದೇ ಕಲ್ಯಾಣ ಕರ್ನಾಟಕದ ಕಲಬುರಗಿ, ರಾಯಚೂರು ಜಿಲ್ಲೆಗಳಲ್ಲೂ ಬಿಸಿಲಿನ ಝಳ ಎರಡು ದಿನದಿಂದ ಹೆಚ್ಚಾಗಿದ್ದು, ಸೋಮವಾರವೂ ಬಿಸಿಲಿನ ವಾತಾವರಣ ಕಂಡು ಬಂದಿದೆ.ಮುಂದಿನ 7 ದಿನಗಳ ಕರ್ನಾಟಕ ರಾಜ್ಯದಾದ್ಯಂತ ಒಣ ಹವೆಯಿರುವ ಸಾದ್ಯತೆಯಿದ್ದು, ಬಿಸಿಲು ಹಾಗೂ ಅಲ್ಲಲ್ಲಿ ಜೋರಾದ ಗಾಳಿಯೊಂದಿಗೆ, ಅಲ್ಲಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆಯಿದೆ. ಒಳನಾಡು ಜಿಲ್ಲೆಗಳ ಕೆಲವು ಭಾಗಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ಮುಂದುವರಿಯುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಟಿಎಂಸಿ ಅಡಿ ನೀರು ಹರಿವು

ಕರ್ನಾಟಕದಲ್ಲಿ ಅತಿ ಹೆಚ್ಚು ಉಷ್ಣಾಂಶ ಹಾಗೂ ಸಾಮಾನ್ಯಕ್ಕಿಂತ ಅಧಿಕ ಬಿಸಿಲು ಇರುವುದು ಮೈಸೂರಿನಲ್ಲಿಯೇ. ಸದ್ಯ 34 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದ್ದರೆ, ಸುಮಾರು 5 ಡಿಗ್ರಿ ಸೆಲ್ಸಿಯಸ್ ಹೆಚ್ಚಿದೆ.

ಮಂಡ್ಯದಲ್ಲೂ 34 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ಇಲ್ಲಿಯೂ 4.2 ಡಿಗ್ರಿ ಸೆಲ್ಸಿಯಸ್ ಸಾಮಾನ್ಯಕ್ಕಿಂತ ಹೆಚ್ಚಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಮಧ್ಯೆ ಕರ್ನಾಟಕದ ದಾವಣಗೆರೆಯಲ್ಲಿ 32 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಕಂಡು ಬಂದಿದೆ. ಇದು ಸಾಮಾನ್ಯಕ್ಕಿಂತ 3.1 ಡಿಗ್ರಿ ಸೆಲ್ಸಿಯಸ್. ಜಿಲ್ಲೆಯ ಹಲವು ಭಾಗಗಳಲ್ಲಿ ಬೇಸಿಗೆಯಂತಹ ಬಿಸಿಲಿನ ಅನುಭವವಾಗುತ್ತಿದೆ. ಮಧ್ಯಾಹ್ನದ ಹೊತ್ತಿನಲ್ಲಿ ಹೊರಕ್ಕೆ ಕಾಲಿಡಲು ಆಗುತ್ತಿಲ್ಲ ಎಂದು ದಾವಣಗೆರೆ ಜಿಲ್ಲೆಯ ಶ್ರೀನಿವಾಸ ಅರ್ಚಕ್ ಹೇಳುತ್ತಾರೆ.

ಚಿಕ್ಕಾಬಳ್ಳಾಪುರ ಜಿಲ್ಲೆಯ ಚಿಂತಾಮಣಿಯಲ್ಲಿ 33.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದರೆ, 4.5 ಡಿಗ್ರಿ ಸೆಲ್ಸಿಯಸ್ ಸಾಮಾನ್ಯಕ್ಕಿಂತ ಅಧಿಕವಾಗಿದೆ. ಚಿತ್ರದು ರ್ಗದಲ್ಲಿ 31.5 ಡಿಗ್ರಿ ಸೆಲ್ಸಿಯಸ್, ಶಿವಮೊಗ್ಗದಲ್ಲಿ 31.56 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಇರುವುದರಲ್ಲಿ ಹಾಸನದಲ್ಲಿ ಉಷ್ಣಾಂಶದ ಪ್ರಮಾಣ 29.5 ಡಿಗ್ರಿ ಸೆಲ್ಸಿಯಸ್, ಆಗುಂಬೆಯಲ್ಲಿ 28.7 ಡಿಗ್ರಿ ಸೆಲ್ಸಿಯಸ್ ದಾಖಲಾಗಿರುವುದು ಕಡಿಮೆ.

ಉತ್ತರ ಕರ್ನಾಟಕದ ರಾಯಚೂರಿನಲ್ಲಿ 35 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದರೆ, ಇದು ಸಾಮಾನ್ಯಕ್ಕಿಂತ 3 ಡಿಗ್ರಿ ಅಧಿಕ. ಕಲಬುರಗಿಯಲ್ಲಿ 34.8 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದ್ದರೆ ಇದು ಸಾಮಾನ್ಯಕ್ಕಿಂತ 3.1 ಡಿಗ್ರಿ ಸೆಲ್ಸಿಯಸ್ ಅಧಿಕ. ವಿಜಯಪುರದಲ್ಲಿ 34 ಡಿಗ್ರಿ ಸೆಲ್ಸಿಯಸ್, ಬೀದರ್‌ನಲ್ಲಿ 33.2 ಡಿಗ್ರಿ ಸೆಲ್ಸಿಯಸ್, ಬಾಗಲಕೋಟೆಲ್ಲಿ 33 ಡಿಗ್ರಿ ಸೆಲ್ಸಿಯಸ್, ಕೊಪ್ಪಳದಲ್ಲಿ 32.5 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಬೆಳಗಾವಿ ವಿಮಾನ ನಿಲ್ದಾಣದಲ್ಲಿ 29.8 ಡಿಗ್ರಿ ಸೆಲ್ಸಿಯಸ್, ಧಾರವಾಡದಲ್ಲಿ 30.4 ಡಿಗ್ರಿ ಸೆಲ್ಸಿಯಸ್, ಹಾವೇರಿಯಲ್ಲಿ 30.8 ಡಿಗ್ರಿ ಸೆಲ್ಸಿಯಸ್, ಗದಗದಲ್ಲಿ 32.8 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

ಕರಾವಳಿ ಭಾಗದ ಕಾರವಾರದಲ್ಲಿ 32.6 ಡಿಗ್ರಿ ಸೆಲ್ಸಿಯಸ್, ಮಂಗಳೂರು ನಗರ ಹಾಗೂ ವಿಮಾನ ನಿಲ್ದಾಣ ಪ್ರದೇಶದಲ್ಲಿ 31.6 ಡಿಗ್ರಿ ಸೆಲ್ಸಿಯಸ್ ಹಾಗೂ ಹೊನ್ನಾವರದಲ್ಲಿ 31.1 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ.

## ಅವಹೇಳನಕಾರಿ ಹೇಳಿಕೆ ಸಹಿಸಲ್ಲ

ಮಹಿಳೆಯರ ಕೊಡುಗೆ ಅಪಾರವಾಗಿದೆ. ಮಹಿಳೆಯರ ವಿರುದ್ಧ ಬಳಸಲಾಗುವ ಯಾವುದೇ ಕೆಟ್ಟ ಭಾಷೆ ಅಥವಾ ದ್ವ-ಂದ್ವಾರ್ಥದ ಮಾತುಗಳನ್ನು ನಾನು ಎಂದಿಗೂ ಸಹಿಸುವುದಿಲ್ಲ. ರಾಜಕೀಯದಲ್ಲಿ ಕಠಿಣ ಟೀಕೆಗಳು ಏನೇ ಇರಲಿ, ಆದರೆ ಮಹಿಳೆಯರ ತೇಜೋವಧೆ ಮಾಡುವ ಹೇಳಿಕೆಗಳಿರಬಾರದು ಎಂದು ಪ್ರತಿಪಾದಿಸಿದ್ದಾರೆ.

ಮುಂದುವರಿದು, ಇತ್ತೀಚೆಗೆ ತಮಿಳುನಾಡಿನಲ್ಲಿ ಮಹಿಳೆಯರ ವಿರುದ್ಧ ಕೆಟ್ಟ ಭಾಷೆ ಬಳಸುವುದು, ದ್ವಂದ್ವಾರ್ಥದಲ್ಲಿ ಮಾತನಾಡುವುದು ಹೆಚ್ಚಾಗುತ್ತಿದೆ. ಎಲ್ಲವನ್ನೂ ಜನ ಗಮನಿಸುತ್ತಿದ್ದಾರೆ. ಯಾರೇ ಆಗಲಿ ಕೀಳಾಗಿ ಮಾತನಾಡಬಾರದು. ಹಿರಿಯ ನಾಯಕಿ ಜಯಲಲಿತಾ ಅವರೂ ಇದೇ ವಿಧಾನಸಭೆಯಲ್ಲಿ ಎಷ್ಟೊಂದು ಅವಮಾನ ಎದುರಿಸಿದ್ದರು ಎಂಬುದು ನಮಗೆಲ್ಲ ತಿಳಿದಿದೆ. ಮಹಿಳೆಯರಿಗೆ ಗೌರವ ಕೊಡುವುದನ್ನು ಪ್ರತಿಯೊಬ್ಬರೂ ಕಲಿಯಬೇಕು, ಇಲ್ಲದಿದ್ದರೆ ಕಾನೂನು ತನ್ನ ಕೆಲಸ ಮಾಡುತ್ತದೆ ಎಂದು ಎಚ್ಚರಿಸಿದ್ದಾರೆ.

ಕಾವೇರಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ತಂಜಾವೂರಿನಲ್ಲಿ ಆಯೋಜಿಸಿದ್ದ ರೈತರ ಪ್ರತಿಭಟನೆಯಲ್ಲಿ ಉದಯನಿಧಿ ಮಾತನಾಡಿದ್ದರು. ಈ ವೇಳೆ ತ್ರಿಷಾ ವಿರುದ್ಧ ಅವಹೇಳನಕಾರಿ ಹಾಗೂ ದ್ವಂದ್ವಾರ್ಥದ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿತ್ತು.

ತಮಿಳಗ ವೆಟ್ರಿ ಕಳಗಂ (ಟಿವಿಕೆ) ತಂಜಾವೂರು ಜಿಲ್ಲಾ ಮಹಿಳಾ ಘಟಕದ ಸಂಚಾಲಕಿ ಎಸ್.ಬೈರವಿ ಅವರು ತಂಜಾವೂರು ಪೂರ್ವ ಪೊಲೀಸ್ ಠಾಣೆಯಲ್ಲಿ ಉದಯನಿಧಿ ವಿರುದ್ಧ ದೂರು ನೀಡಿದ್ದರು.

'ಆ.3ರಂದು ನಡೆದ ಪ್ರತಿಭಟನೆಯಲ್ಲಿ ಉದಯನಿಧಿ ಅವರು ಭಾಷಣ ಮಾಡುತ್ತಿದ್ದಾಗ ಕೆಲವರು 'ತ್ರಿಷಾ, ತ್ರಿಷಾ' ಎಂದು ಜೋರಾಗಿ ಕೂಗಿದ್ದಾರೆ. ಅದಕ್ಕೆ ಉದಯನಿಧಿ ಅಶ್ಲೀಲ ಮತ್ತು ದ್ವಂದ್ವಾರ್ಥದ ಮಾತಿನ ಮೂಲಕ ಪ್ರತಿಕ್ರಿಯಿಸಿದ್ದಾರೆ' ಎಂದು ದೂರಿನಲ್ಲಿ ಆರೋಪಿಸಲಾಗಿತ್ತು.

ಈ ಘಟನೆಗೆ ಸಂಬಂಧಿಸಿದಂತೆ ಆಗಸ್ಟ್ 4ರಂದು ತಮಿಳುನಾಡು ಪೊಲೀಸರು ಉದಯನಿಧಿ ಸ್ಟಾಲಿನ್ ಅವರನ್ನು ಬಂಧಿಸಿದ್ದರು. ತದನಂತರ ಮದ್ರಾಸ್ ಹೈಕೋರ್ಟ್ ಆದೇಶದಂತೆ ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿತ್ತು. ಈ ಘಟನೆಯು ತಮಿಳುನಾಡಿನಲ್ಲಿ ರಾಜಕೀಯ ವಿವಾದ ಸೃಷ್ಟಿಸಿತ್ತು. ಟಿವಿಕೆ ರಾಷ್ಟ್ರೀಯ ವಕ್ತಾರ ಪಿ.ಸೆಲ್ವಕುಮಾರ್ ಅವರು ದೆಹಲಿಯಲ್ಲಿ ರಾಷ್ಟ್ರೀಯ ಮಹಿಳಾ ಆಯೋಗಕ್ಕೂ ಅಧಿಕೃತ ದೂರು ಸಲ್ಲಿಸಿದ್ದರು. ಉದಯನಿಧಿ ಅವರಿಂದ ವಿವರಣೆ ಕೋರಿ ನೋಟಿಸ್ ಜಾರಿಗೊಳಿಸುವಂತೆ ಹಾಗೂ ಬೇಷರತ್ ಕ್ಷಮೆಯಾಚನೆಗೆ ಆಗ್ರಹಿಸುವಂತೆ ಆಡಳಿತ ಪಕ್ಷವು ಆಯೋಗವನ್ನು ಕೋರಿತ್ತು.

## ಎಲ್‌ಪಿಜಿ ಬುಕ್ಕಿಂಗ್ ಅವಧಿ 25 ದಿನ

ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಪಶ್ಚಿಮ ಏಷ್ಯಾದ ಸಂಘರ್ಷದ ಹಿನ್ನೆಲೆಯಲ್ಲಿ ಎಲ್‌ಪಿಜಿ ಪೂರೈಕೆಯಲ್ಲಿ ವ್ಯತ್ಯಯ ಉಂಟಾದ ಕಾರಣ, ನಗರ ಪ್ರದೇಶಗಳಲ್ಲಿ ಒಂದು ಸಿಲಿಂಡರ್ ಖರೀದಿಸಿದ 25 ದಿನಗಳ ನಂತರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ 45 ದಿನಗಳ ನಂತರ ಮತ್ತೊಂದು ಸಿಲಿಂಡರ್ ಪಡೆಯುವಂತೆ ನಿಯಮ ಜಾರಿಗೊಳಿಸಲಾಗಿತ್ತು. ಇದೀಗ ಎಲ್‌ಪಿಜಿ ಪೂರೈಕೆ ಪರಿಸ್ಥಿತಿ ಸುಧಾರಿಸಿದ್ದು, ಕೇಂದ್ರ ಸರ್ಕಾರ ನಿರ್ಬಂಧವನ್ನು ಸಡಿಲಿಸಿದೆ' ಎಂದು ಸುರೇಶ್ ಗೋಪಿ ತಿಳಿಸಿದ್ದಾರೆ.

ಇನ್ನು ನಗರ-ಗ್ರಾಮೀಣ ಎಂಬ ಯಾವುದೇ ವ್ಯತ್ಯಾಸವಿಲ್ಲದೆ ದೇಶದ ಎಲ್ಲ ಗೃಹಬಳಕೆಯ ಎಲ್‌ಪಿಜಿ ಗ್ರಾಹಕರು 25 ದಿನಗಳ ಅಂತರದಲ್ಲಿ ಮತ್ತೊಂದು ಸಿಲಿಂಡರ್ ಬುಕ್ ಮಾಡಬಹುದಾಗಿದೆ. ಈ ಬದಲಾವಣೆಯನ್ನು ತಕ್ಷಣದಿಂದಲೇ ಜಾರಿಗೆ ತರುವಂತೆ ಪೆಟ್ರೋಲಿಯಂ ಸಚಿವಾಲಯವು ತೈಲ ಮಾರುಕಟ್ಟೆ ಕಂಪನಿಗಳಿಗೆ ಸೂಚನೆ ನೀಡಿದೆ ಎಂದು ಅವರು ಹೇಳಿದ್ದಾರೆ.

ಈ ಸಂಬಂಧ ಪೆಟ್ರೋಲಿಯಂ ಸಚಿವಾಲಯವು ತೈಲ ಮಾರುಕಟ್ಟೆ ಕಂಪನಿಗಳಿಗೆ ಕಳುಹಿಸಿರುವ ಪತ್ರದ ಪ್ರತಿಯನ್ನೂ ಸಚಿವರು ತಮ್ಮ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

## ಆಳವಾದ ಅಧ್ಯಯನದಿಂದ ಶಾಶ್ವತ ಗಜಲ್ ಸಾಹಿತ್ಯ : ಪ್ರೊ. ಸಿದ್ದರಾಜು ಪುಜಾರಿ

ಹೊನ್ಕಲ್ ಅವರು "ಬುದ್ಧ, ಬಸವ, ಗಾಂಧಿಯವರು ತಮ್ಮ ಚಿಂತನೆಗಳನ್ನು ಬಿತ್ತಿ ಹೋಗಿದ್ದಾರೆ.

ಆ ಬೆಳಕಿನಲ್ಲಿ ಇಂದಿನ ಕಾಲಮಾನದ ಸಾಕ್ಷಿ ಪ್ರಜ್ಞೆಯಾದ ಲೇಖಕರು ಸಹ ವರ್ತಮಾನದ ತಲ್ಲಣಗಳಿಗೆ ಸ್ಪಂದಿಸಿ ತಮ್ಮ ಕಾವ್ಯ ಕಟ್ಟಬೇಕು ಎಂದು ಕರೆ ನೀಡಿ-ದರು. ವೇದಿಕೆಯಲ್ಲಿ ಬಹುಭಾಷಾ ಕವಿ ಡಾ.ಕಾಶಿನಾಥ ಅಂಬಲಿಗಿ,ಲೇಖಕರಾದ ಮಹಾದೇವ ಬಸರಕೋಡ,ಜಿಲ್ಲಾ ಕಸಾಪ ಅಧ್ಯಕ್ಷ ಡಾ.ಲಿಂಗರಾಜ್ ಅಂಗಡಿ,ಕಥೆಗಾರ ಚೆನ್ನಪ್ಪ ಅಂಗಡಿ ಮುಂತಾದವರು ಗೌರವ ಉಪಸ್ಥಿತಿ ಹೊಂದಿದ್ದರು.

ಪೂರ್ಣ ಕಾರ್ಯಕ್ರಮದ ಸರ್ವಾಧ್ಯಕ್ಷತೆಯನ್ನು ಹಿರಿಯ ಗಜಲ್ ಕವಿ ಹಾಗೂ ಮಕ್ಕಳ ತಜ್ಞರು ಆದ ಡಾ.ಶ್ರೀಶೈಲ್ ಮಾದಣ್ಣನವರು ವಹಿಸಿಕೊಂಡಿದ್ದರು. ಅವರ ಷಷ್ಟ್ಯಬ್ಧಿ ಅಂಗವಾಗಿ ಅವರು ಈ ಸಾಹಿತ್ಯ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಂಡು ವಿನೂತನವಾಗಿ ತಮ್ಮ ಷಷ್ಟ್ಯಬ್ಧಿ ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಸುಮಾರು ಇಪ್ಪತ್ತು ಗಜಲ್ ಲೇಖಕರು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಲೇಖಕ- ಲೇಖಕಿಯರಿಗೆ ರಾಷ್ಟ್ರೀಯ ಗಜಲ್ ಮಾಣಿಕ್ಯ,ಗಜಲ್ ರತ್ನ,ಗಜಲ್ ಸೇವಾ ರತ್ನ, ಸರ್ವೇಪಲ್ಲಿ ರಾಧಾಕೃಷ್ಣನ್, ಸರ್ ಎಂ ವಿಶ್ವೇಶ್ವರಯ್ಯ ಅವರ ಹೆಸರಿನಿಂದ ಪ್ರಶಸ್ತಿ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಗಜಲ್ ಗೋಷ್ಠಿ ಸಹ ನಡೆಯಿತು.

ಮೂವತ್ತಕ್ಕೂ ಹೆಚ್ಚು ಹೆಸರಾಂತ ಗಜಲ್ ಕವಿಗಳು ನಾಡಿನ ಎಲ್ಲಾ ಜಿಲ್ಲೆಗಳ ಮೂಲಕ ಮತ್ತು ಮುಂಬಯಿ, ಗೋವಾದಂತಹ ಹೊರನಾಡಿನಿಂದಲೂ ಸಹ ಬಂದು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಹಿರಿಯ ಗಜಲ್ ಕವಿ ಮಹಮ್ಮದ್ ಬಡ್ಡೂರು ಗಜಲ್ ಕವಿಗೋಷ್ಠಿಯಲ್ಲಿ ಆಶಯ ನುಡಿಯನ್ನಾಡಿದರು. ಅನೇಕ ಹೆಸರಾಂತ ಹಾಡುಗಾರರಾದ ಡಾ. ಶ್ರೀಧರ್ ಕುಲಕರ್ಣಿ, ವಿದುಷಿ ಶ್ರುತಿ ಕುಲಕರ್ಣಿ,ಪಂಡಿತ ನಿರಂಜನ ಜೆ ಧಾರವಾಡ,ಕುಮಾರಿ ಪೂರ್ವಿ ನಿರಂಜನ,ಅರುಣ ಗೋಂಧಳಿ,ಶ್ರೀಮತಿ ಶರ್ಮಿಳಾ ಮಲಕವಾಡ ಹಳಿಯಾಳ,ಕುಮಾರಿ ಸಂಜನಾ ಚಪ್ಪಳಗಾವಿ ಧಾರವಾಡ, ಕುಮಾರ್ ಆಕಾಶ ಗೋಂಧಳಿ ಹಳಿಯಾಳ,ಶ್ರೀ ಮಹಾಂತೇಶ ತೋಟಗೇರ ದಾಂಡೇಲಿ ಹಾಗೆಯೇ ವಾದ್ಯವೃಂದದಲ್ಲಿ ಪಂಡಿತ ಶಂಕರ ಕಬಾಡಿ, ಶ್ರೀ ಪ್ರಸಾದ ಮಡಿವಾಳ,ಶ್ರೀ ವಿಜಯ್ ಸುತಾರ,ಶ್ರೀ ಪ್ರಮೋದ ಹೆಬ್ಬಳ್ಳಿ ಮುಂತಾದ ಗಾನ ಗಾರುಡಿಗರ ಸಂಗೀತದ ಪ್ರಭೆ ಎಲ್ಲರನ್ನೂ ಮಂತ್ರಮುಗ್ಧರನ್ನಾಗಿಸಿತು.

ಆರಂಭದಲ್ಲಿ ಅಕ್ಷರ ದೀಪ ಫೌಂಡೇಶನ್ ಅಧ್ಯಕ್ಷರಾದ ಶ್ರೀ ಪ್ರವೀಣಕುಮಾರ ಕನ್ಯಾಳ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ತಮ್ಮ ಸಂಸ್ಥೆಯ ಇಂತಹ ಬಹುದೊಡ್ಡ ಕಾರ್ಯಕ್ರಮದ ರೂಪುರೇಷೆ ತಿಳಿಸಿದರು. ಕಾರ್ಯಕ್ರಮವನ್ನು ನೆನಪಿನ ನಾವಿಕ ಸಂಸ್ಥೆಯ ರೂವಾರಿ ಶ್ರೀ ಗಣಪತಿ ಹೆಗಡೆ ದಾಂಡೇಲಿ ಎಲ್ಲರನ್ನೂ ಸ್ವಾಗತಿಸಿ ಅತಿಥಿ ಗಣ್ಯರನ್ನು ಪರಿಚಯಿಸಿದರು.

ಗಜಲ್ ಲೇಖಕಿ ಶ್ರೀಮತಿ ಜ್ಯೋತಿ ಮಾಳಿ ಅವರು ನಿರ್ವಹಿಸಿದರು. ಇಡೀ ದಿನ ಗಜಲ್ ಸಂಭ್ರಮ ಸಡಗರದಿಂದ ನಡೆಯಿತು.ನೂರಾರು ಸಾಹಿತ್ಯ ಆಸಕ್ತರು ಕಿಕ್ಕಿರಿದು ತುಂಬಿದ್ದರು.

ಅನಂತ ಜನಶಕ್ತಿ



# ಹಳೆ ಮೀಸಲಾತಿಯಂತೆ ನೇಮಕಾತಿ ಮಾಡಿ : ಸಿಎಂಗೆ ಬಂಜಾರ ಸೇವಾ ಸಂಘ ಮನವಿ

ಕೂಡ್ಲಿಗಿ :ಬಂಜಾರ ಸಮುದಾಯಕ್ಕೆ ಒಳಮೀಸಲಾತಿ ಜಾರಿಯಲ್ಲಿ ಆಗಿರುವ ಸಮಸ್ಯೆ ಮತ್ತು ಬಂಜಾರ ಸಮುದಾಯದವರು ವಲಸೆ ಹೋಗಿರುವ ಜಾಗದಲ್ಲಿ ನಡೆಯುತ್ತಿರುವ ದೌರ್ಜನ್ಯ ಹಾಗೂ ಕಿರುಕುಳಕ್ಕೆ ಕಡಿವಾಣ ಹಾಕಿ ಕಾನೂನಾತ್ಮಕವಾಗಿ ಬಗೆಹರಿಸುವ ಮತ್ತು ವಲಸಿಗರ ಮಕ್ಕಳ ಶಿಕ್ಷಣದ ಭವಿಷ್ಯದ ಸಮಸ್ಯೆಗಳ ಬಗ್ಗೆ ಹರಿಸಬೇಕೆಂದು ಶನಿವಾರ ಕೂಡ್ಲಿಗಿಯಲ್ಲಿ ನಡೆದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಬಂಜಾರ ಸಮುದಾಯದಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಮನವಿ ಪತ್ರ ನೀಡಿದರು.

ಒಳಮೀಸಲಾತಿ ವಿರೋಧಿಸಿ ಹಾಕಿರುವ ಪ್ರಕರಣ ಸಂಖ್ಯೆ 23399/26 ಮತ್ತಿತರೆ ಪ್ರಕರಣಗಳು ಅಂತಿಮವಾಗುವವರೆಗೆ ಹಳೆ ಮೀಸಲಾತಿಯ ಪ್ರಕಾರವೇ ನೇಮಕಾತಿ ಮಾಡಬೇಕು.

400 ರೋಸ್ಟರ್ ಬಿಂದು ಮಾಡಿರುವ ಬದಲಿಗೆ 100 ರೋಸ್ಟರ್ ಬಿಂದು ಪಾಲಿಸಿ, ಂಃಅ ಎಂದು 3 ಗುಂಪು ಮಾಡಿ ತಲಾ 5% ವಿಭಜನೆ ಮಾಡಿ ಒಳಮೀಸಲಾತಿ ಜಾರಿ ಮಾಡಬೇಕು.


ಇಲ್ಲಿಯವರೆಗೆ ಒಳಮೀಸಲಾತಿ ವಿಚಾರವಾಗಿ ರಾಜ್ಯದಲ್ಲಿ ನಡೆದ "ಪ್ರತಿಭಟನೆಯ ಸಮಯದಲ್ಲಿ ಹಾಕಿರುವ ಪೊಲೀಸ್ ಪ್ರಕರಣಗಳನ್ನು" ಈ ಕೂಡಲೇ



ರದ್ದುಪಡಿಸಬೇಕು.

ಬಂಜಾರ ಸಮುದಾಯದವರು ವಲಸಿ ಹೋಗಿರುವ ಮಂಡ್ಯ, ಮೈಸೂರು ಮತ್ತು ಚಾಮರಾಜನಗರ ಸುತ್ತಮುತ್ತಲು "ಕಬ್ಬಿನ ಗದ್ದೆಗಳಿಗೆ" ಕೆಲಸಕ್ಕೆ ಹೋಗುವ ಸಮಯದಲ್ಲಿ, ವಲಸೆ ಹೋಗುವವರ ಮತ್ತು "ಬಾಯ್ಸ್ ಎಸ್‌ಟಿ" ಹಾಸ್ಟೆಲ್‌ಗಳಲ್ಲಿ, ಚಿಕ್ಕಮಗಳೂರು ಸುತ್ತಮುತ್ತಲಿನ ಪ್ರದೇಶದಲ್ಲಿ ನಮ್ಮ ಬಂಜಾರ ಜನರ ಮತ್ತು ಹೆಣ್ಣುಮಕ್ಕಳ ಮೇಲೆ ಹಲವಾರು ರೀತಿಯ ದೌರ್ಜನ್ಯಗಳು ನಡೆಯುತ್ತಿವೆ. ಅವುಗಳು ನಿಲ್ಲಬೇಕು ಮತ್ತು ಹಾಗಾದಾಗ ತಕ್ಷಣವೇ ಕಾನೂನು ಕ್ರಮಗಳನ್ನು ಜರುಗಿಸಿ ನ್ಯಾಯ ಕೊಡಿಸುವ ಕೆಲಸ ಆಗಬೇಕು. ಹೊಟ್ಟೆಪಾಡಿಗಾಗಿ ವಲಸೆ ಹೋದವರ ಮಕ್ಕಳಿಗೆ ಗುರುತಿಸಿ ವಿಶೇಷ ರೀತಿಯಲ್ಲಿ ಹಾಸ್ಟೆಲ್ ಮತ್ತು ಇತರೆ ಸೌಲಭ್ಯ ನೀಡಬೇಕೆಂದು ಬಂಜಾರ ಸೇವಾ ಸಂಘದ ರಾಜ್ಯಕಾರ್ಯದರ್ಶಿ ಕೆ. ಶಿವಕುಮಾರ್ ಬಂಜಾರ ಸೇವಾ ಸಂಘದ ರಾಜ್ಯ ಹೋರಾಟಗಾರ ಟಿ. ವೆಂಕಟೇಶ್ ನಾಯ್ಕ್, ಶಿವಪ್ರಕಾಶ್ ಮಹಾರಾಜ್, ತಾಲೂಕು ಅಧ್ಯಕ್ಷ ವಾಸುದೇವ ನಾಯ್ಕ್, ಸೇರಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಮನವಿ ನೀಡಿದರು.

# ಗುಡೇಕೋಟೆ ರಾಮಲಿಂಗೇಶ್ವರ ದೇವಸ್ಥಾನದ ಗೋಪುರಕ್ಕೆ ನೂತನ ಕಳಸರೋಹಣ ಪ್ರತಿಷ್ಠಾಪನೆ



ಕೂಡ್ಲಿಗಿ :ಗುಡೇಕೋಟೆ ಗ್ರಾಮದಲ್ಲಿರುವ ಐತಿಹಾಸಿಕ ರಾಮಲಿಂಗೇಶ್ವರ ದೇವಸ್ಥಾನದ ಗೋಪುರಕ್ಕೆ ಕಳೆದ 45 ವರ್ಷಗಳಿಂದ ಕಳಸರೋಹಣವಾಗಿದ್ದು ,ಕಳೆದ ವರ್ಷದಲ್ಲಿ ಭಾರಿ ಮಳೆಗಾಳಿಯಿಂದ ದೇವಸ್ಥಾನದ ಗೋಪುರದ ಕಳಸ ನೆಲಕ್ಕೆರುಳಿ ನುಜ್ಜು ನುಜ್ಜಾಗಿದ್ದ.

ಹಿನ್ನಲೆ ರಾಮಲಿಂಗೇಶ್ವರ ದೇವಾಲಯಕ್ಕೆ ಶ್ರಾವಣ ಮಾಸದ ಕಡೆ ಸೋಮವಾರದ ಅಂಗವಾಗಿ ವೀರಶೈವ ಲಿಂಗಾಯತ ಸಮುದಾಯದವರಿಂದ ದೇವಸ್ಥಾನವನ್ನ ಸ್ವಚ್ಛತೆಗೊಳಿಸಿ,ತೆಂಗಿನ ಗರಿ ಬಾಳೆಕಂಬ ಜೀರೊ ಲೈಟ್ ಗಳಿಂದ ದೇವಸ್ಥಾನವನ್ನ ಅಲಂಕಾರಗೊಳಿಸಿದರು.

ಭಾನುವಾರ ರಾತ್ರಿಯಿಂದ ಬೆಳಗಿನಜಾವದವರೆಗೆ ಭಜನೆಗಳು ಜರುಗಿದವು.ಸೋಮವಾರ ಬೆಳಿಗ್ಗೆ 9 ಗಂಟೆ ದೊ–ರೆ ಭಾವಿಯಿಂದ ಗಂಗಮ್ಮನ ಶಾಸ್ತ್ರದೊಂದಿಗೆ ರಾಮಲಿಂಗೇಶ್ವರನಿಗೆ ವಿರುಕ್ತಮಠದ ಶ್ರೀ ಶಿವಕುಮಾರ್ ಸ್ವಾಮಿಗಳಿಂದ ರುದ್ರಾಭಿಷೇಕ. ಆರಾಧನೆ ಹಾಗೂ ಪೂಜೆಗಳಿಂದ ನೆರವೇರಿಸಿದರು. ನಂತರ ಗೋಪುರಕ್ಕೆ ನೂತನ ಕಳಸರೋಹಣ ಪ್ರತಿಷ್ಠಾಪನೆಯನ್ನ ಭಕ್ತಿಯಿಂದ ವಿಜೃಂಭಣೆಯಿಂದ ಸಮರ್ಪಿಸಿದರು.ಭಕ್ತರಿಗೆ ಪ್ರಸಾದವನ್ನ ಆಯೋಜಿಸಲಾಯಿತು.ಈ ಸಂಧರ್ಭದಲ್ಲಿ ಜೋಡುಗಪ್ಲೆ ರಮೇಶ,ಕೆ.ಪಿ. ಮಂಜುನಾಥ,ಪೂಜಾರಿ



ಶಿವುಕುಮಾರ,ಎ, ಬಸವರಾಜ, ಬಿ.ಎಸ್. ಬಸವರಾಜ,ಎ.ಸತೀಶ, ನೂರಾರು ಮಹಿಳೆಯರು ಸೇರಿದಂತೆ ಭಾಗವಹಿಸಿದರು.

# ರಂಜಿತಾ ಸಂಶಯಾಸ್ಪದ ಸಾವಿನ ನಿಷ್ಪಕ್ಷಪಾತ ತನಿಖೆಗೆ ಆಗ್ರಹ




ವಿಜಯನಗರ: ಹೂವಿನಹಡಗಲಿ ತಾಲ್ಲೂಕಿನ ಕುರುವತ್ತಿ ಗ್ರಾಮದ 17 ವರ್ಷದ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಬಿ. ರಂಜಿತಾ ಅವರ ಸಂಶಯಾಸ್ಪದ ಸಾವಿನ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜದ ಮುಖಂಡರು ಆಗ್ರಹಿಸಿದರು.

ಈ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಹೆಚ್ಚುವರಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ವಿಜಯನಗರ ಜಿಲ್ಲಾ ಅಂಬಿಗರ ಸಂಘದ ಮಾಜಿ ಅಧ್ಯಕ್ಷ ಅಂಬಾಡಿ ನಾಗರಾಜ್ ಮಾತನಾಡಿ, ರಂಜಿತಾ ಅವರು ಹೆಚ್ಚಿನ ವಿದ್ಯಾಭ್ಯಾಸದ ಉದ್ದೇಶದಿಂದ ದಾವಣಗೆರೆಯ ಟೀಮ್ ಅಕಾಡೆಮಿಗೆ ಸೇರಿ, ಅಲ್ಲಿನ ಹಾಸ್ಟೆಲ್‌ನಲ್ಲಿ ವಾಸವಾಗಿದ್ದರು. ಸೆಪ್ಟೆಂಬರ್ 2ರಂದು ಸಂಜೆ ಹಾಸ್ಟೆಲ್‌ಗೆ ತೆರಳಿದ ಕೆಲವೇ ಸಮಯದ ಬಳಿಕ ಅವರು ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ರಾತ್ರಿ ಸುಮಾರು 8.44ಕ್ಕೆ ಹಾಸ್ಟೆಲ್ ವಾರ್ಡನ್ ಕುಟುಂಬದವರಿಗೆ ದೂರವಾಣಿ ಮೂಲಕ ಮಾಹಿತಿ ನೀಡಿದ್ದಾರೆ ಎಂದು ತಿಳಿಸಿದರು.

ಘಟನೆಯ ಸಂದರ್ಭ ಹಾಗೂ ಮೃತದೇಹದ ಸ್ಥಿತಿಗೆ ಸಂಬಂಧಿಸಿದಂತೆ ಕುಟುಂಬಸ್ಥರು ಮತ್ತು ಸಂಬಂಧಿಕರು ಹಲವು ಅನುಮಾನಗಳನ್ನು ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ, ಇದು ಆತ್ಮಹತ್ಯೆಯೇ ಅಥವಾ ಯಾವುದೇ ಅಪರಾಧ ಕೃತ್ಯ ನಡೆದಿದೆಯೇ ಎಂಬುದನ್ನು ಯಾವುದೇ ಪೂರ್ವನಿರ್ಧಾರವಿಲ್ಲದೆ ತನಿಖೆ ನಡೆಸಬೇಕು ಎಂದು ಅವರು ಒತ್ತಾಯಿಸಿದರು. ಮೃತಳ ತಂದೆ ಭೋವಿ ನಿಂಗಪ್ಪ ಅವರು ಸೆಪ್ಟೆಂಬರ್ 3ರಂದು ಪೊಲೀಸರಿಗೆ ಲಿಖಿತ ದೂರು ನೀಡಿದ್ದು, ದಾವಣಗೆರೆ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂ–ಖ್ಯೆ 201/2026ರಡಿ ಬಿಎನ್‌ಎಸ್ ಕಲಂ 103(1) ಅಡಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿಸಿದರು.

ಹಾಸ್ಟೆಲ್‌ನಲ್ಲಿ ಕರ್ತವ್ಯದಲ್ಲಿದ್ದ ವಾರ್ಡನ್, ಪ್ರಾಂಶುಪಾಲರು ಹಾಗೂ ಇತರ ಸಂಬಂಧಪಟ್ಟವರ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು. ಘಟನಾ ಸ್ಥಳದ ಸಿಸಿಟಿವಿ ದೃಶ್ಯಾವಳಿಗಳು, ಮೊಬೈಲ್ ಕರೆ ವಿವರಗಳು, ಸಂದೇಶಗಳು ಸೇರಿದಂತೆ ತಾಂತ್ರಿಕ ಸಾಕ್ಷ್ಯಗಳನ್ನು ಸಂರಕ್ಷಿಸಿ ಪರಿಶೀಲಿಸಬೇಕು. ಮರಣೋತ್ತರ ಪರೀ–ಕ್ಷೆ, ವಿಧಿವಿಜ್ಞಾನ ಪ್ರಯೋಗಾಲಯದ ವರದಿ ಹಾಗೂ ವೈದ್ಯಕೀಯ ದಾಖಲೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಸಾವಿನ ನಿಖರ ಕಾರಣವನ್ನು ಪತ್ತೆಹಚ್ಚಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಮೃತ ವಿದ್ಯಾರ್ಥಿನಿಯ ಸಹಪಾಠಿಗಳು, ಹಾಸ್ಟೆಲ್ ಸಿಬ್ಬಂದಿ ಹಾಗೂ ಘಟನೆಯ ಕುರಿತು ಮಾಹಿತಿ ಹೊಂದಿರುವವರ ಹೇಳಿಕೆಗಳನ್ನು ದಾಖಲಿಸಿ, ಕುಟುಂಬಸ್ಥರು ವ್ಯಕ್ತಪಡಿಸಿರುವ ಅನುಮಾನಗಳನ್ನು ಗಂಭೀರವಾಗಿ ಪರಿಗಣಿಸುವಂತೆ ಸರ್ಕಾರ ಹಾಗೂ ಪೊಲೀಸ್ ಇಲಾಖೆಯನ್ನು ಗಂಗಾಮತ ಸಮಾಜದ ಮುಖಂಡರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜದ ಹಂಗಾಮಿ ಅಧ್ಯಕ್ಷ ವೈ. ಯಮುನೇಶ್, ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರಪ್ಪ, ನಿವೃತ್ತ ಪಿಎಸ್‌ಐ ಕಬ್ಬೇರ್ ರಾಮಪ್ಪ ಸೇರಿದಂತೆ ಮಡ್ಡಿ ವೆಂಕಪ್ಪ, ಶ್ರೀಧರ್, ಗಣೇಶ್ ಚಿಕ್ಕ ಕುರುವತ್ತಿ, ನಿಂಗರಾಜು ಬೆಂಡಿಗೇರಿ, ನಿಂಗಪ್ಪ ಕರಿಯಮ್ಮನವರ್, ತಿರುಕಪ್ಪ ಸಿಗ್ಲಿ, ಶಿವು ಕಣಿವಿ, ಹಾಲೇಶ್ ಬೋವಿ, ನಾಗಪ್ಪ ಕಲ್ಲಮ್ಮನವರ್, ರಾಜೇಶ್, ವೀರೇಶ್, ಸುರೇಶ್, ಶಶಿ, ಶಿವಕುಮಾರ್, ವೈ. ಜಂಬಯ್ಯ, ಆರ್. ಜಂಬಯ್ಯ, ಎನ್. ಅನಿಲ್, ಎಂ. ರಾಘವೇಂದ್ರ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಹಾಲಿನ ದರ ಪರಿಷ್ಕರಣೆ; ಉತ್ಪಾದಕರಿಗೆ ಸಿಹಿ ಸುದ್ದಿ : ಎಸ್.ಆರ್.ಗೌಡ

ಶಿರಾ: ಹೈನುಗಾರಿಕೆಯನ್ನು ಮತ್ತಷ್ಟು ಪ್ರೋತ್ಸಾಹಿಸುವುದು ತುಮಕೂರು ಹಾಲು ಒಕ್ಕೂಟದ ಪ್ರಮುಖ ಗುರಿಯಾಗಿದ್ದು, ಅತಿ ಶೀಘ್ರದಲ್ಲೇ ಹಾಲಿನ ದರ ಪರಿಷ್ಕರಣೆ ಮಾಡಿ ಹಾಲು ಉತ್ಪಾದಕರಿಗೆ ಸಿಹಿ ಸುದ್ದಿ ನೀಡಲಾಗುವುದು ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಎಸ್.ಆರ್. ಗೌಡ ಹೇಳಿದರು.

ಶಿರಾ ತಾಲೂಕಿನ ಲಿಂಗದಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತೀವ್ರ ಬರಗಾಲದ ಹಿನ್ನೆಲೆಯಲ್ಲಿ ರೈತರು ಕೃಷಿಯಿಂದ ವಿಮುಖರಾಗುತ್ತಿದ್ದು, ಹೈನುಗಾರಿಕೆಯತ್ತ ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ. ಹೈನುಗಾರಿಕೆ ಸಣ್ಣ ಹಾಗೂ ಮಧ್ಯಮ ರೈತ ಕುಟುಂಬಗಳಿಗೆ ಆರ್ಥಿಕ ಶಕ್ತಿಯನ್ನು ನೀಡುತ್ತಿದ್ದು, ವೈಜ್ಞಾನಿಕ ಪದ್ಧತಿಯಲ್ಲಿ ಹೈನುಗಾರಿಕೆ ನಡೆಸುವುದರಿಂದ ಉತ್ತಮ ಯಶಸ್ಸು ಸಾಧಿಸಬಹುದು ಎಂದರು. ಹಾಲಿನ ಗುಣಮಟ್ಟವನ್ನು ಕಾಪಾಡಿಕೊಳ್ಳುವುದರ ಜೊತೆಗೆ ಹೆಚ್ಚಿನ ಪ್ರಮಾಣದಲ್ಲಿ ಗುಣಮಟ್ಟದ ಹಾಲು ಉತ್ಪಾದಿಸುವ ಮೂಲಕ ಉತ್ಪಾದಕರ ಆರ್ಥಿಕ



ಸ್ಥಿತಿಯನ್ನು ಮತ್ತಷ್ಟು ಬಲಪಡಿಸಬಹುದು. ಹಾಲು ಉತ್ಪಾದಕರ ಹಿತದೃಷ್ಟಿಯಿಂದ ಒಕ್ಕೂಟವು ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಎಸ್.ಆರ್. ಗೌಡ ತಿಳಿಸಿದರು. ಕಾರ್ಯಕ್ರಮದಲ್ಲಿ ಲಿಂಗದಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಸುಧಾಕರ ಗೌಡ, ವಿಸ್ತರಣಾಧಿಕಾರಿ ಚೈತ್ರ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ರಂಗನಾಥ್, ಉಪಾಧ್ಯಕ್ಷೆ ಗಂಗಮ್ಮ, ನಿರ್ದೇಶಕರಾದ ಭಾಗ್ಯಮ್ಮ, ಗಂಗಮ್ಮ, ಕೆ.ಬಿ. ಶಾರದಮಣಿ, ಬಾಲಕೃಷ್ಣಪ್ಪ, ನಿಂಗಣ್ಣ, ರಾಮಣ್ಣ, ಎನ್. ಪ್ರಕಾಶ್, ಮೋಹನ್ ಕುಮಾರ್, ಎನ್. ಮಂಜುನಾಥ್, ರಾಜಣ್ಣ, ಸಮಾಲೋಚಕ ಬಾಬಾ ಫಕ್ರುದ್ದೀನ್, ಪಿ.ಎಂ., ಕಾರ್ಯದರ್ಶಿ ಎಲ್. ಮಹೇಶ್, ಕೊಟ್ಟ ಶ್ರೀನಿವಾಸ್, ಪ್ರಕಾಶ್ ಸೇರಿದಂತೆ ಹಾಲು ಉತ್ಪಾದಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಗುರುಗಳಿಗೆ ಪುಷ್ಪಾರ್ಚನೆ ಮೂಲಕ ಶಿಕ್ಷಕರ ದಿನಾಚರಣೆ



ಕುಣಿಗಲ್ : ವಿದ್ಯಾರ್ಥಿಗಳು ಗುರುಗಳಿಗೆ ಹೂಗಳ ಪುಷ್ಪಾರ್ಚನೆ ಗೈಯುವ ಮೂಲಕ ವಿಶೇಷ ರೀತಿಯಲ್ಲಿ ಶಿಕ್ಷಕರ ದಿನಾಚರಣೆ ಆಚರಿಸಿ ಸಂಭ್ರಮಿಸಿದರು.

ಪಟ್ಟಣದ ಜ್ಞಾನಭಾರತಿ ವಿದ್ಯಾ ಸಂಸ್ಥೆಯ ವಿದ್ಯಾರ್ಥಿಗಳು ಸರ್ವಪಲ್ಲಿ ಡಾ. ರಾಧಾಕೃಷ್ಣರವರ ಜನ್ಮ ದಿನದಂದು ಆಚರಿಸುವ ಶಿಕ್ಷಕರ ದಿನಾಚರಣೆ ಸಂದರ್ಭದಲ್ಲಿ ವಿದ್ಯಾರ್ಥಿಗಳು ಗುರುಗಳಿಗೆ ಪುಷ್ಪಾ ಮಳೆಗೆರೆದು ವಿಶಿಷ್ಟ ರೀತಿಯಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಕೃಷ್ಣ ಜನ್ಮಾಷ್ಟಮಿ ವೇಷ ಭೂಷಣ ಪ್ರದರ್ಶನ ಮಾಡಿದರು.

ಈ ಸಂದರ್ಭದಲ್ಲಿ ಜ್ಞಾನಭಾರತಿ ವಿದ್ಯಾ ಸಂಸ್ಥೆಯ ಅಧ್ಯಕ್ಷರು ಮಾಜಿ ಶಾಸಕ ಬಿ.ಬಿ. ರಾಮಸ್ವಾಮಿಗೌಡ ಮಾತನಾಡುತ್ತಾ ವಿದ್ಯಾರ್ಥಿಗಳಲ್ಲಿ ಶಿಸ್ತು ಸಂಯಮ ಸಂಸ್ಕೃತಿ ಬಾಲ್ಯದಿಂದಲೂ ಜೀವನದಲ್ಲಿ ಅಳವಡಿಸಿಕೊಂಡಾಗ ಉತ್ತಮ ಸಮಾಜದ ಒಳ್ಳೆಯ ಆದರ್ಶ ವ್ಯಕ್ತಿಗಳಾಗಿ ರೂಪಗೊಂಡು ಮಾದರಿಯಾಗಿರುತ್ತಾರೆ ಇಂದಿನ ವಿದ್ಯಾಭ್ಯಾಸವು ಈಗಿನ ಆಧುನಿಕ ತಂತ್ರಜ್ಞಾನ ವ್ಯವಸ್ಥೆಗೆ ವಿದ್ಯಾರ್ಥಿಗಳು ಹೊಂದಿಕೊಂಡು ಗುರು ಹಿರಿಯರು ಪೋಷಕರು ತಂದೆ ತಾಯಿಗಳಿಗೆ ಗೌರವ ನೀಡುವಂತಹ ಆದರ್ಶ ವ್ಯಕ್ತಿಗಳಾಗಿ ರೂಪಗೊಳ್ಳಬೇಕಾಗಿದೆ ಮಕ್ಕಳು ಕೃಷ್ಣಾಷ್ಟಮಿ ಅಂಗವಾಗಿ ವಿವಿಧ ವೇಷ ಭೂಷಣಗಳನ್ನ ಅಲಂಕಾರಗೊಂಡಿದ್ದು ಶಾಲೆಯಲ್ಲಿ ಸಂಭ್ರಮ ಮನೆ ಮಾಡಿದೆ ಮಕ್ಕಳಿಗೆ ಬಿಡುವಿನ ವೇಳೆಯಲ್ಲಿ ಭಗವದ್ಗೀತೆ ಶ್ರೀ ಕೃಷ್ಣನ ವಿಚಾರಧಾರೆಗಳನ್ನು ಬೋಧಿಸಲು ಮುಂದಾಗುವುದರೊಂದಿಗೆ ಮಕ್ಕಳು ಸಂಸ್ಕಾರ ವಂತರಾಗಬೇಕಿದೆ. ಮಕ್ಕಳಲ್ಲಿ ಬರಿ ಮೊಬೈಲ್ ಹೆಚ್ಚಾಗಿದ್ದು ಈ ಬಗ್ಗೆ ಪೋಷಕರು ಗಮನಹರಿಸುವುದರೊಂದಿಗೆ ಮಕ್ಕಳಲ್ಲಿ ಸಂಸ್ಕಾರಯುತ ಮಾನವೀಯ ಮೌಲ್ಯಗಳನ್ನು ಬೆಳೆಸುವುದು ಪೋಷಕರ ಮತ್ತು ಶಿಕ್ಷಕರ ಜವಾಬ್ದಾರಿಯಾಗಿದೆ ಎಂದು ಕಿವಿಮಾತು ಹೇಳಿದರು.

ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಚೆನ್ನಪ್ಪ. ನಿರ್ದೇಶಕರಾದ ಬೆಟ್ಟಸ್ವಾಮಿ ಗೌಡ.ಕಾಲೇಜಿನ ಪ್ರಾಚಾರ್ಯರಾದ ಗೋವಿಂದೇಗೌಡ. ಮುಖ್ಯ ಶಿಕ್ಷಕರಾದ ಪ್ರಕಾಶ್. ಗಂಗಮ್ಮ. ಶಿಕ್ಷಕರು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬ್ಲ್ಯಾಕ್‌ಮೇಲ್‌ಗೆ ಜಗ್ಗಲ್ಲ, ಅಭಿವೃದ್ಧಿಯೇ ಗುರಿ: ಶಾಸಕ ವೆಂಕಟೇಶ್




ಪಾವಗಡ: ತಾಲೂಕಿನಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಸಹಿಸದೆ ಕೆಲವರು ಬ್ಲ್ಯಾಕ್‌ಮೇಲ್ ಹಾಗೂ ಲಂಚದ ದಂಧೆಗೆ ಇಳಿದಿದ್ದಾರೆ. ಇಂತಹ ಯಾವುದೇ ಬೆದರಿಕೆಗಳಿಗೆ ತಾನು ಜಗ್ಗುವುದಿಲ್ಲ. ಕ್ಷೇತ್ರದ ಬಡವರು ಹಾಗೂ ಸಾರ್ವಜನಿಕರ ಶ್ರೇಯೋಭಿವೃದ್ಧಿಯೇ ತನ್ನ ಗುರಿ ಎಂದು ತುಮಕೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಹಾಗೂ ಶಾಸಕ ಎಚ್.ವಿ. ವೆಂಕಟೇಶ್ ಹೇಳಿದರು.

ಶಾಸಕರ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ನಡೆದ 'ಪ್ರಜಾ ಸೇವಾ ಆಂದೋಲನ' ಕಾರ್ಯಕ್ರಮದಲ್ಲಿ ವೈ.ಎನ್. ಹೊಸಕೋಟೆ ಸಂತೆ ಮೈದಾನದ ವಿಚಾರವಾಗಿ ಕೆಲವರು ಗೊಂದಲ ಸೃಷ್ಟಿಸಲು ಯತ್ನಿಸಿದ್ದಾರೆ ಎಂದು ಆರೋಪಿಸಿದರು.

ಸಂತೆ ಮೈದಾನದ ವಿಚಾರ ನ್ಯಾಯಾಲಯದ ಪರಿಶೀಲನೆಯಲ್ಲಿರುವ ಹಿನ್ನೆಲೆಯಲ್ಲಿ ಸಾರ್ವಜನಿಕವಾಗಿ ಈ ಕುರಿತು ಚರ್ಚಿಸಲು ಸಾಧ್ಯವಿಲ್ಲ. ಸಂಬಂಧಪಟ್ಟವರು ಅರ್ಜಿ ಸಲ್ಲಿಸಿ ತೆರಳುವಂತೆ ತಿಳಿಸಲಾಗಿತ್ತು. ಆದರೆ, ಸಾರ್ವಜನಿಕರ ಮುಂದೆ ಪ್ರಚಾರ ಪಡೆಯುವ ಉದ್ದೇಶದಿಂದ ಮೂವರು ವ್ಯಕ್ತಿಗಳು ಮೈಕ್ ನೀಡುವಂತೆ ಪಟ್ಟು ಹಿಡಿದರು. ಅರ್ಜಿ ನೀಡಿ ಹೋಗುವಂತೆ ಹಾಗೂ ಮೈಕ್ ನೀಡಲು ಸಾಧ್ಯವಿಲ್ಲ ಎಂದು ತಿಳಿಸಿರುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಸಂತೆ ಮೈದಾನಕ್ಕೆ ಜಾಗ ದಾನ ನೀಡಿದವರೇ ಈಗಾಗಲೇ ಈ ಕುರಿತ ನೈಜ ಸಂಗತಿಗಳನ್ನು ಸ್ಪಷ್ಟಪಡಿಸಿದ್ದಾರೆ. ಆದರೂ ಕೆಲವರು ಅನಗತ್ಯವಾಗಿ ಈ ವಿಚಾರವನ್ನು ದೊಡ್ಡದು ಮಾಡುತ್ತಿದ್ದಾರೆ ಎಂದು ದೂರಿದರು.

ಆಮ್ ಆದ್ಮಿ ಪಕ್ಷದ ಹೆಸರು ಹೇಳಿಕೊಂಡು ಓಡಾಡುತ್ತಿರುವ ರಾಮಾಂಜಿನಪ್ಪ, ನಾರಾಯಣಪ್ಪ, ವಕೀಲ ತಿಪ್ಪೇಸ್ವಾಮಿ ಹಾಗೂ ವೀರ್ಲಗೊಂದಿ ನರಸಿಂಹಯ್ಯ ಅವರು ಸೇರಿಕೊಂಡು ತಾಲೂಕಿನಲ್ಲಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದಾರೆ ಎಂದು ಶಾಸಕ ಆರೋಪಿಸಿದರು. ಆರ್‌ಟಿಐ ಅರ್ಜಿಗಳನ್ನು ಸಲ್ಲಿಸಿ ಬಳಿಕ 'ಸೆಟಲ್‌ಮೆಂಟ್' ಮಾಡಿಕೊಳ್ಳುವುದನ್ನೇ ಕಾಯಕ ಮಾಡಿಕೊಂಡಿದ್ದಾರೆ ಎಂದು ದೂರಿದರು.

ವಕೀಲರು ವೃತ್ತಿಯ ಘನತೆಯನ್ನು ಕಾಪಾಡಿಕೊಳ್ಳಬೇಕು. ಆದರೆ ಕೆಲವರು ವೃತ್ತಿಯ ಘನತೆ ಮರೆತು ದಲ್ಲಾಳಿ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಟೀಕಿಸಿದರು. ರಾಮಾಂಜಿನಪ್ಪ ವಿರುದ್ಧ ಬೆಂಗಳೂರಿನಲ್ಲಿ ನಡೆದಿರುವ ಕೆಲವು ಘಟನೆಗಳನ್ನು ಉಲ್ಲೇಖಿಸಿದ ಶಾಸಕ, ಇಂತಹವರು ಪಾವಗಡಕ್ಕೆ ಬಂದು ಸ್ಥಳೀಯರ ಹಾಗೂ ನಾಯಕ ಸಮುದಾಯದ ಒಗ್ಗಟ್ಟನ್ನು ಮುರಿಯಲು ಮತ್ತು ದ್ವೇಷದ ವಾತಾವರಣ ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಆರ್ಯವೈಶ್ಯ ಸಂಘದ ಕನ್ನಿಕಾಪರಮೇಶ್ವರಿ ದೇವಸ್ಥಾನದ ವಿಚಾರದಲ್ಲೂ ನ್ಯಾಯಾಲಯದ ಮೊರೆ ಹೋಗಿ ಕಿರುಕುಳ ನೀಡಲಾಗುತ್ತಿದೆ ಎಂದು ಅವರು ದೂರಿದರು.

"ಯಾವುದೇ ಸತ್ಕಾರ್ಯ ಮಾಡದೆ ಜೇಬು ತುಂಬಿಸಿಕೊಳ್ಳುವುದನ್ನೇ ಗುರಿಯಾಗಿಸಿಕೊಂಡಿರುವ ಇಂತಹ ಗುಂಪುಗಳಿಗೆ ನಾನು ಜಗ್ಗುವುದಿಲ್ಲ. ಕ್ಷೇತ್ರದ ಬಡವರು ಹಾಗೂ ಸಾರ್ವಜನಿಕರ ಶ್ರೇಯೋಭಿವೃದ್ಧಿಗಾಗಿ ಜನಸೇವೆ ಮತ್ತು ಅಭಿವೃದ್ಧಿ ಕಾರ್ಯಗಳನ್ನು ನಿರಂತರವಾಗಿ ಮುಂದುವರಿಸುತ್ತೇನೆ," ಎಂದು ಶಾಸಕ ಎಚ್.ವಿ. ವೆಂಕಟೇಶ್ ಹೇಳಿದರು.

# ರಸ್ತೆಯಲ್ಲೇ ಗಾಂಜಾ ಮಾರಾಟ;

## 1.53 ಲಕ್ಷ ಮೌಲ್ಯದ ಮಾದಕ ವಸ್ತು ಜಪ್ತಿ, ನಾಲ್ವರು ವಶಕ್ಕೆ

ಹುಬ್ಬಳ್ಳಿ: ರೈಲ್ವೆ ನಿಲ್ದಾಣದ ಪಾರ್ಕಿಂಗ್ ಹತ್ತಿರದ ರಸ್ತೆಯಲ್ಲೇ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ನಾಲ್ವರನ್ನು ಕೇಂದ್ರ ಅಪರಾಧ ಶಾಖೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮಾಂತೇಶ ಹೊಸಮನಿ, ಅಲಿಣಾ ನೂರುಲ್ಲಾ, ಫಯಾಜ್ ಗೂಂಟವಾಲೆ ಹಾಗೂ ಸೊಯಬ್ ಪೊಲೀಸರ ವಶದಲ್ಲಿರುವ ಆರೋಪಿಗಳು.ಆರೋಪಿಗಳಿಂದ ಒಟ್ಟು 1.53 ಲಕ್ಷ ರೂ. ಮೌಲ್ಯದ 6.135 ಕೆಜಿ ಗಾಂಜಾ, ನಾಲ್ಕು ಮೊಬೈಲ್‌ಗಳು, ಒಂದು ಸಾವಿರ ರೂಪಾಯಿ ನಗದು ಹಾಗೂ ಒಂದು ದ್ವಿಚಕ್ರ ವಾಹನವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ರೈಲ್ವೆ ನಿಲ್ದಾಣದಂತಹ ಜನನಿಬಿಡ ಪ್ರದೇಶದ ಪಾರ್ಕಿಂಗ್ ರಸ್ತೆಯಲ್ಲೇ ಗಾಂಜಾ ಮಾರಾಟ ಮಾಡುತ್ತಿದ್ದ ಆರೋಪ ಕೇಳಿಬಂದಿರುವುದು ಆತಂಕಕ್ಕೆ ಕಾರಣವಾಗಿದೆ. ಈ ಸಂಬಂಧ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಗಾಂಜಾ ಎಲ್ಲಿಂದ ತರಲಾಗಿತ್ತು? ಯಾರಿಗೆ ಮಾರಾಟ ಮಾಡಲಾಗುತ್ತಿತ್ತು? ಈ ಜಾಲದ ಹಿಂದೆ ಇನ್ನಷ್ಟು ಮಂದಿ ಇದ್ದಾರೆಯೇ? ಎಂಬ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಮಹಿಳೆಯರಿಗೆ ಸುರಕ್ಷಿತ ಕೆಲಸದ ವಾತಾವರಣ ಕಲ್ಪಿಸಿ : ನಾಗಲಕ್ಷ್ಮಿ ಚೌಧರಿ



ಬೆಳಗಾವಿ: ಮಹಿಳೆಯರು ಕೆಲಸ ಮಾಡುವ ಸ್ಥಳಗಳಲ್ಲಿ ಗೌರವ, ಘನತೆ ಹಾಗೂ ಸುರಕ್ಷತೆಯೊಂದಿಗೆ ಕಾರ್ಯನಿರ್ವಹಿಸಲು ಅನುಕೂಲಕರ ವಾತಾವರಣ ನಿರ್ಮಾಣವಾಗಬೇಕು. ಮಹಿಳೆಯರು ತಮ್ಮ ಹಕ್ಕುಗಳ ಅರಿವು ಪಡೆಯಬೇಕು. ಮಹಿಳೆಯರು ಯಾವುದೇ ಭಯ ಅಥವಾ ಮುಜುಗರವಿಲ್ಲದೆ ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಳ್ಳುವ ಹಾಗೂ ಅಗತ್ಯ ನೆರವು ಪಡೆಯುವಂತಹ ವಾತಾವರಣವನ್ನು ನಿರ್ಮಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ನಾಗಲಕ್ಷ್ಮಿ ಚೌಧರಿ ತಿಳಿಸಿದರು. ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಸುವರ್ಣ ಸೌಧದ ಸೆಂಟ್ರಲ್ ಹಾಲ್ ನಲ್ಲಿ ಸೋಮವಾರ (ಇಂದು) ನಡೆದ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಕಾಯ್ದೆ 2013ರ ಕುರಿತು ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಮಹಿಳೆಯರ ಸುರಕ್ಷತೆ ಹಾಗೂ ಹಕ್ಕುಗಳ ರಕ್ಷಣೆಗೆ ರಾಜ್ಯ ಮಹಿಳಾ ಆಯೋಗದಿಂದ ಹಲವು ಕಾರ್ಯಕ್ರಮಗಳನ್ನ ಜಾರಿಗೆ ತರಲಾಗಿದೆ. ಮಹಿಳೆಯರಿಗೆ ಅಗತ್ಯ ನೆರವು ಒದಗಿಸುವ ನಿಟ್ಟಿನಲ್ಲಿ ಸಹಾಯವಾಣಿ 181, 112 ಹಾಗೂ ವಾಟ್ಸಪ್ ಮೂಲಕ ಸಹಾಯ ಸಂದೇಶ ಸೇರಿದಂತೆ ವಿವಿಧ ಸೌಲಭ್ಯಗಳನ್ನ ಕಲ್ಪಿಸಲಾಗಿದೆ. ಮಹಿಳೆಯರು ತಮಗಾಗುವ ಕಿರುಕುಳ, ಅನ್ಯಾಯ ಅಥವಾ ಇತರೆ ಸಮಸ್ಯೆಗಳ ಕುರಿತು ಆಯೋಗವನ್ನು ಸಂಪರ್ಕಿಸಿ ಸೂಕ್ತ ನೆರವು ಹಾಗೂ ಮಾರ್ಗದರ್ಶನ ಪಡೆಯಬಹುದಾಗಿದೆ ಎಂದು ಹೇಳಿದರು. ಕಾರ್ಯಸ್ಥಳದಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳದಿಂದ ಮುಕ್ತವಾದ ವಾತಾವರಣ ಕಲ್ಪಿಸುವುದು ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಕಾರ್ಯಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ ತಡೆ ಕಾಯ್ದೆ ಕುರಿತು ಅರಿವು ಮೂಡಿಸುವುದು ಅಗತ್ಯವಾಗಿದೆ.

ಪ್ರತಿಯೊಂದು ಸಂಸ್ಥೆಯಲ್ಲಿಯೂ ಕಔಖಊ ಕಾಯ್ದೆಯ ನಿಯಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಮಹಿಳೆಯರ ಗೌರವ, ಘನತೆ ಹಾಗೂ ಸುರಕ್ಷತೆಯನ್ನು ಕಾಪಾಡಬೇಕು ಎಂದು ತಿಳಿಸಿದರು. ಮಹಿಳೆಯರ ರಕ್ಷಣೆ ಹಾಗೂ ಹಕ್ಕುಗಳಿಗಾಗಿ ಮಹಿಳೆಯರೇ ರೂಪಿಸಿದ ಸಂಸ್ಥೆಯೇ ಮಹಿಳಾ ಆಯೋಗವಾಗಿದೆ. ಬಾಲ್ಯ ವಿವಾಹ ತಡೆ ಹಾಗೂ ಹೆಣ್ಣು ಭ್ರೂಣಹತ್ಯೆ ನಿರ್ಮೂಲನೆ ಸೇರಿದಂತೆ ಮಹಿಳೆಯರು ಮತ್ತು ಹೆಣ್ಣುಮಕ್ಕಳ ಮೇಲಿನ ಅನ್ಯಾಯಗಳನ್ನು ತಡೆಯುವ ಉದ್ದೇಶದಿಂದ ಮಹಿಳಾ ಆಯೋಗದ ಅಗತ್ಯತೆ ಬಲವಾಗಿ ಮೂಡಿಬಂದಿತು ಎಂದರು.

## ಹೃದಯಾಘಾತದಿಂದ ಮುಖ್ಯ ಶಿಕ್ಷಕ ಸಾವು

ಧಾರವಾಡ: ಕರ್ತವ್ಯದ ಮೇಲಿದ್ದಾಗಲೇ ಹೃದಯಾಘಾತದಿಂದ ಶಾಲಾ ಮುಖ್ಯ ಶಿಕ್ಷಕ ಸಾವನ್ನಪ್ಪಿದ ಘಟನೆ ಧಾರವಾಡ ನಗರದ ಮಾಳಮಡ್ಡಿಯ ಸರ್ಕಾರಿ ಶಾಲೆಯಲ್ಲಿ ನಡೆದಿದೆ. ಮುಲ್ಲಾನವರ್ (59) ಹೃದಯಾಘಾತದಿಂದ ಸಾವನ್ನಪ್ಪಿದ ಮುಖ್ಯ ಶಿಕ್ಷಕ. ಕಳೆದ ಎರಡು ದಿನಗಳ ಶಾಲೆಯಲ್ಲಿ ಇದ್ದಾಗಲೇ ಹೃದಯಾಘಾತವಾಗಿತ್ತು. ಈ ವೇಳೆ ಶಾಲೆಯಲ್ಲಿ ಇದ್ದ ಶಿಕ್ಷಕರು ಮುಖ್ಯ ಶಿಕ್ಷಕ ಮುಲ್ಲಾನವರನ್ನು ಆಸ್ಪತ್ರೆಗೆ ರವಾನೆ ಮಾಡಿದ್ದರು. ಆದರೆ ಚಿಕಿತ್ಸೆ ಫಲಿಸದೇ ಮುಖ್ಯ ಶಿಕ್ಷಕ ಸಾವನ್ನಪ್ಪಿದ್ದಾರೆ.

ಶುಕ್ರವಾರ ಸಂಜೆ ಮುಖ್ಯ ಶಿಕ್ಷಕ ಸಾವನ್ನಪ್ಪಿದ ಹಿನ್ನೆಲೆ ಶಿಕ್ಷಕರ ದಿನಾಚರಣೆ ದಿನವೇ ಮುಲ್ಲಾನವರ ಕುಟುಂಬದವರು ಅವರ ಅಂತ್ಯಕ್ರಿಯೆ ಮಾಡಿದ್ದಾರೆ.

## 150 ವೈದ್ಯಕೀಯ ಸೀಟು ಲಭ್ಯ: ಕೆಇಎ

ಬೆಂಗಳೂರು: ವೈದ್ಯಕೀಯ ಮತ್ತು ದಂತ ವೈದ್ಯಕೀಯ ಸೀಟು ಹಂಚಿಕೆಯ ಎರಡನೇ ಸುತ್ತಿಗೆ ಹೆಚ್ಚುವರಿಯಾಗಿ 150 ವೈದ್ಯಕೀಯ ಸೀಟು ಲಭ್ಯವಾಗಿದ್ದು, ಆಸಕ್ತರು ಸೆ.9ರವರೆಗೆ ಆಪ್ಷನ್ಸ್ ದಾಖಲಿಸಬಹುದು ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಪ್ರಸನ್ನ ತಿಳಿಸಿದ್ದಾರೆ. ಬಾಗಲಕೋಟೆಯ ಸರ್ಕಾರಿ ವೈದ್ಯಕೀಯ ಕಾಲೇಜಿಗೆ 100 ಸೀಟು ಹಾಗೂ ಫಾರೂಕಿಯ ವೈದ್ಯಕೀಯ ಕಾಲೇಜಿಗೆ ಹೆಚ್ಚುವರಿಯಾಗಿ 50 ಸೀಟು ಪ್ರವೇಶಕ್ಕೆ ಅವಕಾಶ ನೀಡಿ ವೈದ್ಯಕೀಯ ಶಿಕ್ಷಣ ಇಲಾಖೆ ಕೆಇ-ಎಗೆ ಪತ್ರ ಬರೆದಿದೆ. ಹೀಗಾಗಿ ಬಾಗಲಕೋಟೆಯದು ಹೊಸ ಕಾಲೇಜಾಗಿರುವ ಕಾರಣ ಆ ಕಾಲೇಜಿನ ಆಪ್ಷನ್ಸ್ ದಾಖಲಿಸಲು ಅವಕಾಶ ನೀಡಲಾಗಿದೆ. ಎರಡನೇ ಸುತ್ತಿನಲ್ಲಿ ಭಾಗವಹಿಸಲು ಇಚ್ಛಿಸುವವರು ಲಾಗಿನ್ ಆಗಿ ಒಪ್ಪಿಗೆ ಸೂಚಿಸಬೇಕು. ಆಪ್ಷನ್ಸ್ ಅದಲು-ಬದಲು ಮಾಡಿಕೊಳ್ಳುವುದಕ್ಕೂ ಅವಕಾಶ ನೀಡಲಾಗಿದೆ ಎಂದು ಅವರು ವಿವರಿಸಿದರು.

ಮೊದಲ ಸುತ್ತಿನಲ್ಲಿ ಸೀಟು ಹಂಚಿಕೆ ನಂತರ ಚಾಯ್ಸ್-2 ಮತ್ತು ಚಾಯ್ಸ್-3 ಆಯ್ಕೆ ಮಾಡಿರುವವರು ಹಾಗೂ ಸೀಟು ಹಂಚಿಕೆಯಾಗದಿರುವವರು ಈ ಸುತ್ತಿನಲ್ಲಿ ಭಾಗವಹಿಸಬಹುದು ಎಂದು ಅವರು ವಿವರಿಸಿದ್ದಾರೆ.

# ಸಮಸಮಾಜ ನಿರ್ಮಾಣಕ್ಕೆ ಶರಣರ ತತ್ವವೇ ಆದರ್ಶ

ಕಾನಹೊಸಹಳ್ಳಿ: ಸಕಲ ಜೀವಾತ್ಮರಿಗೆ ಲೇಸಾಗಲಿ ಎನ್ನುವಂತೆ ಮಾನವ ಧರ್ಮ ಹಾಗೂ ಸಮಸಮಾಜವನ್ನು ನಿರ್ಮಿಸಲು ಶ್ರಮಿಸಿದ 12ನೇ ಶತಮಾನದ ಶರಣರ ನಡೆ, ನುಡಿ ನಮಗೆಲ್ಲ ಆದರ್ಶವಾಗಬೇಕಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ರಾಜ್ಯ ಉಪಾಧ್ಯಕ್ಷ ಡಾ.

ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಯಿಂದ ಆಯೋಜಿಸಿದ್ದ ಶರಣ ತತ್ವ ಚಿಂತನೆಯ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ವಾನ್ ಗುರುಸಿದ್ಧಯ್ಯನವರು ಕಲಿಸಿದ ಜ್ಞಾನ, ಸಂಸ್ಕಾರ ನಮಗೆ ಪ್ರೇರಣೆಯಾಗಿದೆ.

ಅವರದು ಅಪರೂಪದ ವ್ಯಕ್ತಿತ್ವ. ಪವಾಡ ಪುರುಷರು ಹಾಗೂ ಶರಣರ ಪರಂಪರೆಯಲ್ಲಿ ಕೊಂಕಲ್ ಸೋಮೇಶ್ವರ ಸ್ವಾಮಿಗಳು ದಾಸೋಹ, ಅಕ್ಷರ ನೀಡಿದ್ದರಿಂದ ಸಾವಿರಾರು ಜನರಿಗೆ ಅನುಕೂಲವಾಗಿದೆ. ಕನ್ನಡ ಭಾಷೆ ಎನ್ನುವುದು ಒಬ್ಬರನ್ನು ಒಬ್ಬರು ಪ್ರೀತಿಸುವುದಾಗಿದೆ ಎಂದು ಹೇಳಿದರು.

ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ. ಕೆ. ರವೀಂದ್ರನಾಥ ಮಾತನಾಡಿ, ಐದನೇ ತರಗತಿ ಓದಿದ್ದ ಗ್ರಾಮೀಣ ಪ್ರದೇಶದ ಶಿಕ್ಷಕರಾಗಿದ್ದ ಕನ್ನಡ ಪಂಡಿತ ಬಿ.ಎಂ. ಗುರುಸಿದ್ಧಯ್ಯ ಅವರು ಹಳೆಗನ್ನಡದ ವಿದ್ವತ್ತನ್ನು ಹೊಂದಿದವರು. 1946ರಲ್ಲಿ ಸಾಹಿತ್ಯ ಕೃಷಿಯಲ್ಲಿ ತೊಡಗಿದ ಪಂಡಿತರು, ಶರಣ ಸಾಹಿತ್ಯವನ್ನು ಹೆಚ್ಚು ಓದಿದ್ದರು. 1953ರಲ್ಲಿ ಮದ್ರಾಸ್ ಸರ್ಕಾರ ವಿದ್ವತ್ ಪದವಿಯನ್ನು ನೀಡಿದೆ. ಶರಣಬಸವೇಶ್ವರ ಚರಿತ್ರೆ ಕಾವ್ಯವನ್ನು ಬರೆದಿದ್ದಾರೆ ಎಂದು ತಿಳಿಸಿದರು.



ಬುದ್ಧ, ಬಸವ, ಪೈಗಂಬರ್, ಮಹಾವೀರ, ಅಂಬೇಡ್ಕರ್‌ರಂತಹ ಸಾಕಷ್ಟು ಮಹಾತ್ಮರು ಮಾನವರ ಉದ್ಧಾರಕ್ಕಾಗಿ ಅವತರಿಸಿ ಬಂದವರು ಎನ್ನುವುದನ್ನು ಬಿ.ಎಂ. ಗುರುಸಿದ್ಧಯ್ಯನವರು ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷೀಯ ಮಾತುಗಳಲ್ಲಿ ಹೇಳಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಹಿರಿಯ ಸಾಹಿತಿ ಹಾಗೂ ಶಸಾಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಎಂ. ರವಿಕುಮಾರ್, ಹಿರಿಯ ವಿದ್ವಾಂಸ ಡಾ. ಎ. ವೃಷಭೇಂದ್ರಾಚಾರ್, ಸಾಹಿತಿ ಭೀಮಣ್ಣ ಗಜಾಪುರ ಮಾತನಾಡಿದರು. ಎಸ್.ಎಂ. ಸಂಗಮೇಶ್ವರಯ್ಯ, ಪರಿಷತ್ ತಾಲೂಕು ಅಧ್ಯಕ್ಷ ಎಚ್.ಎಂ.ಬಿ. ಗುರುಮೂರ್ತಿ, ಕೆ.ಜಿ. ಕುಮಾರ ಗೌಡ, ಎಚ್.ಕೆ. ವೆಂಕಟೇಶ್ವರ ರಾವ್, ಹುಡೇಂ ಕೃಷ್ಣಮೂರ್ತಿ, ಪತ್ರಕರ್ತ ದಯಾನಂದ ಸಜ್ಜನ್, ಕದಳಿ ಮಹಿಳಾ ವೇದಿಕೆ ತಾಲೂಕು ಅಧ್ಯಕ್ಷೆ ಸಕಲಾಪುರದಹಟ್ಟಿ ತಿಪ್ಪೀರಮ್ಮ, ಕಸಾಪ ಅಧ್ಯಕ್ಷ ಎಸ್. ತಿಪ್ಪೇಸ್ವಾಮಿ, ಕೆ.ಪಿ.ಎಂ. ಗಣೇಶಯ್ಯ, ಎಚ್.ಜಿ. ಪ್ರಕಾಶ್ ಗೌಡ, ನಿವೃತ್ತ ಶಿಕ್ಷಕ ಕೆಂಚಮಲ್ಲನಹಳ್ಳಿ ಶಿವಪ್ರಕಾಶ್ ಉಪಸ್ಥಿತರಿದ್ದರು.

ಪ್ರಿಯ ಓದುಗರೇ ಅನಂತ ಜನಶಕ್ತಿ ಕನ್ನಡ ದಿನಪತ್ರಿಕೆಯನ್ನು ತಪ್ಪದೇ ಓದಿರಿ ಹಾಗೂ ಪ್ರೋತ್ಸಾಹಿಸಿ

# 72 ವರ್ಷಗಳ ಸಂಪ್ರದಾಯಕ್ಕೆ ಬ್ರೇಕ್: ಇದೇ ಮೊದಲ ಬಾರಿಗೆ ದೆಹಲಿ ಬದಲು ಗುಜರಾತ್‌ನಲ್ಲಿ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ!

ನವದೆಹಲಿ: 72 ವರ್ಷಗಳ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭವು ದೆಹಲಿಯ ಹೊರಗೆ ನಡೆಯಲಿದ್ದು, ಸೆಪ್ಟೆಂಬರ್ 22 ರಂದು ಗುಜರಾತ್‌ನ ಕೆವಾಡಿಯಾದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

ವಿಶ್ವದ ಅತಿ ಎತ್ತರದ ಪ್ರತಿಮೆಯಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಪ್ರತಿಮೆ() ಯನ್ನು ಹೊಂದಿರುವ ಏಕ್ತಾ ನಗರ ಎಂದು ಮರುನಾಮಕರಣಗೊಂಡಿರುವ ಕೆವಾಡಿಯಾದಲ್ಲಿ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಮಾರಂಭ ನಡೆಯಲಿದೆ. ಈ ಮೂಲಕ ದಶಕಗಳ ಸಂಪ್ರದಾಯಕ್ಕೆ ಬ್ರೇಕ್ ಹಾಕಲಾಗಿದೆ.




ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭವನ್ನು ದೆಹಲಿಯಲ್ಲಿ ನಡೆಸುವುದು ಹಲವು ದಶಕಗಳ ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಸಂಪ್ರದಾಯ. 1954 ರಲ್ಲಿ ಮೊದಲ ರಾಷ್ಟ್ರೀಯ ಪ್ರಶಸ್ತಿಗಳನ್ನು ದೆಹಲಿಯ ವಿಜ್ಞಾನ ಭವನದಲ್ಲಿ ನಡೆಸಲಾಯಿತು. ಅಂದಿನಿಂದ ಇಲ್ಲಿಯವರೆಗೆ ಹೆಚ್ಚಿನ ಪ್ರಶಸ್ತಿ ಪ್ರದಾನ ಸಮಾರಂಭಗಳನ್ನು ಇಲ್ಲಿಯೇ ಆಯೋಜಿಸಲಾಗಿದೆ. ಸಾಮಾನ್ಯವಾಗಿ ರಾಷ್ಟ್ರಪತಿಯೇ ವಿಜೇತರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡುತ್ತಾರೆ. ಇದೇ ಮೊದಲ ಬಾರಿ ದೆಹಲಿಯಿಂದ ಗುಜರಾತ್‌ನ ಏಕ್ತಾ ನಗರಕ್ಕೆ ಸಮಾರಂಭವನ್ನು ಸ್ಥಳಾಂತರಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಈ ತಿಂಗಳ ಕೊನೆಯಲ್ಲಿ ಗುಜರಾತ್‌ಗೆ ಭೇಟಿ ನೀಡುವ ನಿರೀಕ್ಷೆಯಿದೆ. ಈ ಭೇಟಿಯ ಸಂದರ್ಭದಲ್ಲಿ ಅವರು ಏಕ್ತಾ ನಗರಕ್ಕೆ ತೆರಳಿ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರದಾನ ಮಾಡುವ ಸಾಧ್ಯತೆ ಇದೆ ಎಂದು ವರದಿಗಳು ತಿಳಿಸಿವೆ.

# ಸಮಾವೇಶಕ್ಕೆ ಕರೆಯೋದು, ಬಿಡೋದು ಆಯೋಜಕರಿಗೆ ಬಿಟ್ಟದ್ದು, ಅದು ನಮ್ಮ ತಂದೆಯ ಕಾರ್ಯಕ್ರಮ ಅಲ್ಲ: ಯತೀಂದ್ರ

ರಾಯಚೂರು: ಬೆಂಗಳೂರಿನಲ್ಲಿ ನಡೆದಿರೋದು ಅಹಿಂದ ಸಭೆ ಅಲ್ಲ. ಹಿಂದುಳಿದ ಸಂಘಟನೆಗಳ ಒಕ್ಕೂಟದಿಂದ ಕಾರ್ಯಕ್ರಮ ಆಗಿದೆ. ಇದು ನಮ್ಮ ತಂದೆಯವರು ಮಾಡಿದ ಕಾರ್ಯಕ್ರಮ ಅಲ್ಲ ಅಂತ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ.

ರಾಯಚೂರಿನಲ್ಲಿ ಮಾತನಾಡಿದ ಅವರು, ಹಿಂದುಳಿದ ಒಕ್ಕೂಟ ಸಮಾವೇಶಕ್ಕೆ ಸಚಿವ ಸತೀಶ್ ಜಾರಕಿಹೊಳಿಗೆ ಆಹ್ವಾನ ನೀಡದ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಅಹಿಂದ ಯಾರ ಸ್ವತ್ತು ಅಲ್ಲ ನಿಜ, ಅದರಲ್ಲಿ ತಪ್ಪೇನಿಲ್ಲ. ಇದು ನಮ್ಮ ತಂದೆಯವರು ಮಾಡಿದ ಕಾರ್ಯಕ್ರಮ ಅಲ್ಲ, ಯಾವುದೇ ರಾಜಕೀಯ ಕಾರ್ಯಕ್ರಮ ಅಲ್ಲ. ಕರೆಯೋದು, ಬಿಡೋದು ಆಯೋಜ-ಕರಿಗೆ, ಒಕ್ಕೂಟದವರಿಗೆ ಬಿಟ್ಟಿದ್ದು. ಇಂತವರನ್ನೇ ಕರೆಯಿರಿ, ಇವರನ್ನೇ ಬಿಡ್ರಿ ಎಂದು ಹೇಳೋಕೆ ಬರಲ್ಲ. 25 ವರ್ಷದ ಮಹೋತ್ಸವ ಅವರು ಮಾಡಿದ್ದಾರೆ. ಆ ಕಾರ್ಯಕ್ರಮಕ್ಕೆ ತಂದೆಯವರನ್ನು ಸಹ ಕರೆದಿದ್ದರು. ದೊಡ್ಡ ಮಟ್ಟದ ಯಶಸ್ವಿ ಕಾರ್ಯಕ್ರಮ ಮಾಡಿದ್ದಾರೆ ಎಂದಿದ್ದಾರೆ. ಇತ್ತೀಚೆಗೆ ಸಿದ್ದರಾಮಯ್ಯ ಹಾಗೂ




ಸತೀಶ್ ಜಾರಕಿಹೊಳಿ ಅಂತರ ಕಾಯ್ದುಕೊಳ್ಳುತ್ತಿದ್ದಾರಾ ಅನ್ನೋ ವಿಚಾರಕ್ಕೆ ನನಗೆ ಗೊತ್ತಿರುವಂತೆ ಅಂತಹದ್ದೇನು ಇಲ್ಲ ಎಂದು ತಿಳಿಸಿದ್ದಾರೆ.

ಇನ್ನೂ ಬಿಜೆಪಿ ಬಳ್ಳಾರಿ ಚಲೋ ಪಾದಯಾತ್ರೆ ವಿಚಾರವಾಗಿ ಮಾತನಾಡಿ, ಬಿಜೆಪಿಯವರು ಕೂತು ಕೂತು ಸೋಮಾರಿಗಳಾಗಿದ್ದರು. ಸ್ವತಃ ಕ್ರಿಯಾಶೀಲರಾಗಬೇಕು ಅಂತ ಪಾದಯಾತ್ರೆ ಮಾಡುತ್ತಿದ್ದಾರೆ. ಪಾದಯಾತ್ರೆಯಿಂದ ಏನೂ ಪ್ರಯೋಜನ ಇಲ್ಲ. ಯಾವ ಉದ್ದೇಶದಿಂದ ಪಾದಯಾತ್ರೆ ಮಾಡಬೇಕು ಅನ್ಕೊಂಡಿದ್ರೊ ಆ ಉದ್ದೇಶ ಈಡೇರಿದೆ. ಆದ್ರೂ ಪಾದಯಾತ್ರೆ ಮಾಡುತ್ತಿದ್ದಾರೆ ಎಂದಿದ್ದಾರೆ.



ಆಡುಗೋಡಿ ಜನ ಪ್ರಗತಿ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯ 38ನೇ ವರ್ಷದ ವಾರ್ಷಿಕ ಸಭೆಯು ಕೋರಮಂಗಲ ವಿನಾಯಕ ದೇವಸ್ಥಾನದ ಸಭಾಂಗಣದಲ್ಲಿ ನಡೆಯಿತು. ಸಚಿವ ರಾಮಲಿಂಗ ರೆಡ್ಡಿ ರವರನ್ನು ಸೊಸೈಟಿಯ ಅಧ್ಯಕ್ಷರಾದ ಎಸ್ ಜೆ. ಜಗದೀಶ್, ಉಪಾಧ್ಯಕ್ಷರಾದ ಸತ್ಯನಾರಾಯಣ, ಬೋಜಿರಾಜ್, ಆಡುಗೋಡಿ ಶ್ರೀನಿವಾಸ್ ಮೂರ್ತಿ, ನಾಗರಾಜ್, ಸಣ್ಣ ಕೆಂಪಮ್ಮ, ಶ್ವೇತ ಮತ್ತು ಇತರೆ ನಿರ್ದೇಶಕರು ಸೇರಿ ಸಚಿವರನ್ನು ಸನ್ಮಾನಿಸಲಾಯಿತು.

## ಭೋವಿ ಸಮಾಜಕ್ಕೆ ಆರ್ಥಿಕ ಸಬಲೀಕರಣಕ್ಕೆ ಒತ್ತು: ಡಾ. ಎಂ.ರಾಮಪ್ಪ



ವಿಜಯಪುರ : ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಜೊತೆಗೆ ಭೋವಿ ಸಮಾಜಕ್ಕೆ ವೇಳೆ ವಿವಿಧ ಯೋಜನೆಗಳನ್ನು ನೀಡುವುದರ ಮೂಲಕ ಸರ್ಕಾರ ಸಮಾಜದ ಅಭ್ಯುದಯಕ್ಕೆ ಮುಂದಾಗಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಡಾ. ಎಂ.ರಾಮಪ್ಪ ಅವರು ಹೇಳಿದರು. ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸೋಮವಾರ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ವ್ಯಾಪ್ತಿಯಲ್ಲಿ ಬರುವ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ನಿಗಮದಿಂದ ಗಂಗಾ ಕಲ್ಯಾಣ, ಸ್ವಾವಲಂಬಿ ಸಾರಥಿ, ನೇರ ಸಾಲ, ಮಹಿಳಾ ಸಬಲೀಕರಣ, ಹೈನುಗಾರಿಕೆ ಮತ್ತು ಭೂ ಒಡೆತನದಂತಹ ಯೋಜನೆಗಳನ್ನು ನೀಡುವುದರೊಂದಿಗೆ ಭೋವಿ ಸಮಾಜವನ್ನು ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಪ್ರಗತಿಯತ್ತ ಕೊಂಡೊಯ್ಯಲು ಸರ್ಕಾರ ಮುಂದಾಗಿದೆ ಎಂದರು.

ಸಮಾಜದ ಮಕ್ಕಳಿಗೆ ವಿದ್ಯಾಭ್ಯಾಸ ಹಾಗೂ ವಸತಿ ಸೌಲಭ್ಯ ನೀಡುತ್ತಿದ್ದೇವೆ. ಈ ಸೌಲತ್ತುಗಳಿಂದಾಗಿ ಮಕ್ಕಳು ಶಿಕ್ಷಣ ನೀಡಿದರೆ, ಸಮಾಜದ ಬಡತನ ನಿರ್ಮೂಲನೆಯಾಗುತ್ತಿದೆ.

ತನ್ಮೂಲಕ ಭೋವಿ ಸಮಾಜದ ಕಷ್ಟಗಳು ಹಾಗೂ ಅವರ ಬಡತನ ನಿರ್ಮೂಲನೆಗೆ ಸರ್ಕಾರ ಮುಂದಾಗಿದೆ ಎಂದರು. ಉದ್ಯಮಿಗಳಾಗಲು, ಶಿಕ್ಷಣ ಸಂಸ್ಥೆ ಸ್ಥಾಪಿಸಲು ಸಮಾಜಕ್ಕೆ ಸರ್ಕಾರ ಅನುಕೂಲ ಕಲ್ಪಿಸಿದೆ ಎಂದರು. ಮಹಿಳೆಯರ ಸಬಲೀಕರಣಕ್ಕೆ ಮುಂದಾಗಿದೆ. ತಾಯಿಂದಿರು ಮಕ್ಕಳನ್ನು ಶಿಕ್ಷಣ-ಕ್ಕೆ ಹೆಚ್ಚು ಒತ್ತು ಕೊಡಬೇಕು. ವಿದ್ಯಾಭ್ಯಾಸ ಕೊಡಿಸಬೇಕು ಎಂದು ಆಯಾ ಜಿಲ್ಲೆಗೆ ತೆರಳಿ ಮನವಿ ಮಾಡುತ್ತಿದ್ದೇನೆ ಎಂದರು. ಇದಕ್ಕಾಗಿ ಭೋವಿ ಸಮಾಜ ಬಾಂಧವರು ನನ್ನನ್ನು ಹುಡುಕಿಕೊಂಡು ಬೆಂಗಳೂರಿಗೆ ಬರುವುದು ಬೇಡ ಎಂದು ನಾನೇ ಜನರನ್ನು ಹುಡುಕಿಕೊಂಡು ಆಯಾ ಜಿಲ್ಲೆಯ ಹಳ್ಳಿಗಳಿಗೆ ತೆರಳಿ ಸಮಾಜದ ಜನರೊಂದಿಗೆ ಬೆರೆತು, ಅವರಿಗೆ ನಿಗಮದ ಸೌಲಭ್ಯಗಳ ಮನವರಿಕೆ ಮಾಡಿಕೊಡುತ್ತಿದ್ದೇನೆ ಎಂದರು.

## ಶಿವಮೊಗ್ಗದಲ್ಲಿ ಬೆಳ್ಳಂಬೆಳಗ್ಗೆ ಗುಂಡಿನ ಸದ್ದು; ರೌಡಿಶೀಟರ್ ಹತ್ಯೆ ಆರೋಪಿಗೆ ಪೊಲೀಸರ ಗುಂಡೇಟು..!

ಶಿವಮೊಗ್ಗ: ಕೊಲೆ ಪ್ರಕರಣದ ಆರೋಪಿ ಬಂಧಿಸಲು ತೆರಳಿದ್ದ ವೇಳೆ ಪೊಲೀಸರ ಮೇಲೆ ಹಲ್ಲೆಗೆ ಮುಂದಾದ ಆರೋಪಿಯ ಕಾಲಿಗೆ ಪೊಲೀಸರು ಗುಂಡು ಹಾರಿಸಿ ಬಂಧಿಸಿರುವ ಘಟನೆ ಶಿವಮೊಗ್ಗ ಎನ್.ಆರ್.ಪುರ ರಸ್ತೆಯ ಲಿಂಗಾಪುರ ಬಳಿ ಸೋಮವಾರ ನಡೆದಿದೆ.

ಹತ್ಯೆ ಪ್ರಕರಣದ ಆರೋಪಿ ಉಮೇಶ್ ನಾಯ್ಕ್ (27) ಕಾಲಿಗೆ ಪೊಲೀಸರು ಗುಂಡು ಹಾರಿಸಿ, ಬಂಧನಕ್ಕೊಳಪಡಿಸಿದ್ದಾರೆ. ಆರೋಪಿಯನ್ನು ಬಂಧಿಸಲು ಪೊಲೀಸರು ಲಿಂಗಾಪುರಕ್ಕೆ ತೆರಳಿದ್ದ ವೇಳೆ, ಪೊಲೀಸ್ ಸಿಬ್ಬಂದಿ ತಮ್ಮಣ್ಣ ಜಂಬಗಿ ಮೇಲೆ ಆತ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

ಈ ವೇಳೆ ತುಂಗಾನಗರ ಠಾಣೆಯ ಇನ್‌ಸ್ಪೆಕ್ಟರ್ ಗುರುರಾಜ್ ಕರ್ಕಿ ಗಾಳಿಯಲ್ಲಿ ಗುಂಡು ಹಾರಿಸಿ ಎಚ್ಚರಿಕೆ ನೀಡಿದ್ದಾರೆ. ಆದರೂ ಆರೋಪಿ ಪೊಲೀಸರ ಮೇಲೆ ಮತ್ತೆ ಹಲ್ಲೆಗೆ ಮುಂದಾದ ಹಿನ್ನೆಲೆಯಲ್ಲಿ ಆತ್ಮರಕ್ಷಣೆಗಾಗಿ ಆತನ ಕಾಲಿಗೆ ಗುಂಡು ಹಾರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಗುಂಡೇಟಿನಿಂದ ಗಾಯಗೊಂಡ ಉಮೇಶ್ ನಾಯ್ಕ್‌ನನ್ನು ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಹಲ್ಲೆಯಿಂದ ಗಾಯಗೊಂಡ ಪೊಲೀಸ್ ಸಿಬ್ಬಂದಿ ತಮ್ಮಣ್ಣ ಜಂಬಗಿಗೂ ಮೆಗ್ಗಾನ್ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ, ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ತುಂಗಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಇನ್ನು ರಾಮಿನಕೊಪ್ಪದಲ್ಲಿ ಭಾನುವಾರ ಸಂಜೆ ರೌಡಿಶೀಟರ್ ಕಿರಣ್ ಅಲಿಯಾಸ್ ಕುಳ್ಳಿ ಕಿರಣ್‌ನನ್ನು 3-4 ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಹತ್ಯೆ ಮಾಡಿದ್ದರು. ಈ ಕೊಲೆ ಪ್ರಕರಣದ ತನಿಖೆ ನಡೆಸುತ್ತಿದ್ದ ಪೊಲೀಸರು ಇದೀಗ ಪ್ರಮುಖ ಆರೋಪಿಯೊಬ್ಬನನ್ನು ಗುಂಡು ಹಾರಿಸಿ ಬಂಧಿಸಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.